ಸಂಪುಟ : 11 ಸಂಚಿಕೆ: 58 ಪುಟ : 4+2 ಬೆಲೆ: 3.00 ಗುರುವಾರ ಎಪ್ರಿಲ್ 02 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 58 Pages : 4+2 Price : 3.00 Thursday April 02 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಪೊಲೀಸ್ ಧ್ವಜ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಎಪ್ರಿಲ್ 02ರಂದು ಬೆಳಿಗ್ಗೆ 8.00 ಗಂಟೆಗೆ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ಕವಾಯತು ಮೈದಾನ (ಪಿ.ಎಚ್.ಕ್ಯೂ), ಮಲ್ಲಸಮುದ್ರ, ಗದಗದಲ್ಲಿ ಪೊಲೀಸ್ ಧ್ವಜ ದಿನಾಚರಣೆಯನ್ನು ಆಚರಿಸಲಾಗುವುದು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ನಿವೃತ್ತ ಎ.ಎಸ್.ಐ ಎಚ್.ಡಿ. ಗಡಾದ ಅವರು ಆಗಮಿಸಲಿದ್ದಾರೆ.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ರೋಹನ್ ಜಗದೀಶ್ ಅವರು ಸರ್ವರಿಗೂ ಕಾರ್ಯಕ್ರಮಕ್ಕೆ ಆಗಮಿಸಿ ಭಾಗವಹಿಸುವಂತೆ ಆಹ್ವಾನಿಸಿದ್ದಾರೆ.

## ಯಶಸ್ವಿಯಾಗಿ ಪೂರ್ಣಗೊಂಡ ಅರ್ಥಶಾಸ್ತ್ರ ಪರೀಕ್ಷೆ

**■ವಿಜಯಸಾಕ್ಷಿ ಸುದ್ದಿ, ಗದಗ**

2026ರ ಎಸ್.ಎಸ್.ಎಲ್.ಸಿ. ಪರೀಕ್ಷೆ–1ರ ಅಂಗವಾಗಿ ಎಪ್ರಿಲ್ 1ರಂದು ಅರ್ಥಶಾಸ್ತ್ರ ವಿಷಯದ ಪರೀಕ್ಷೆ ಯಶಸ್ವಿಯಾಗಿ ಮತ್ತು ಶಾಂತಿಯುತವಾಗಿ ನಡೆಯಿತು.

ಜಿಲ್ಲೆಯಲ್ಲಿರುವ ಎರಡು ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿಗಳಿಂದ ನೇಮಕಗೊಂಡ ವೀಕ್ಷಕರು ಹಾಜರಾಗಿ, ಪರೀಕ್ಷಾ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ನಡೆಸಿದರು. ಜೊತೆಗೆ ಉಪನಿರ್ದೇಶಕರ ಕಚೇರಿಯಿಂದ ಪ್ರತಿ ಕೇಂದ್ರಕ್ಕೂ ಜಿಲ್ಲಾ ವೀಕ್ಷಕ ದಳ ಹಾಗೂ ಸ್ಥಳೀಯ ಜಾಗೃತ ದಳದ ಅಧಿಕಾರಿಗಳನ್ನು ನಿಯೋಜಿಸಲಾಗಿದ್ದು, ಅವರು ತಮ್ಮ ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಿಸಿದರು.

ನಿಗದಿತ ಸಮಯಕ್ಕೆ ಪ್ರಶ್ನೆಪತ್ರಿಕೆಗಳನ್ನು ಪರೀಕ್ಷಾ ಕೇಂದ್ರಗಳಿಗೆ ಸುರಕ್ಷಿತವಾಗಿ ತಲುಪಿಸಲಾಗಿದ್ದು, ಪರೀಕ್ಷೆಯ ನಂತರ ಉತ್ತರಪತ್ರಿಕೆಗಳನ್ನು ಪೊಲೀಸ್ ಬಿಗಿ ಬಂದೋಬಸ್ತದೊಳಗೆ ಭದ್ರತೆಯೊಂದಿಗೆ ಸಂಗ್ರಹಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ: ಆಸ್ತಿ ತೆರಿಗೆ ದರ ಪರಿಷ್ಕರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ನರೇಗಲ್ಲ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಆಸ್ತಿ ಮಾಲೀಕರು ಮತ್ತು ಅನುಭೋಗದಾರರಿಗೆ ತಿಳಿಸುವುದೇನೆಂದರೆ, 2026–27ನೇ ಸಾಲಿಗೆ ಆಸ್ತಿ ತೆರಿಗೆ ದರಗಳನ್ನು ಪರಿಷ್ಕರಿಸಲಾಗಿದೆ.

ಪರಿಷ್ಕೃತ ದರಗಳ ವಿವರ ಈ ಕೆಳಗಿನಂತಿವೆ. ವಾಸದ ಉದ್ದೇಶದ ಕಟ್ಟಡಗಳಿಗೆ ಶೇ. 3.5, ವಾಣಿಜ್ಯ, ಕೈಗಾರಿಕಾ ಹಾಗೂ ವಾಸೇತರ ಆಸ್ತಿಗಳಿಗೆ ಶೇ. 4, ನಿವೇಶನಗಳಿಗೆ ಶೇ. 5, ಈ ಪರಿಷ್ಕೃತ ದರಗಳು ಎಪ್ರಿಲ್ 01ರಿಂದ ಜಾರಿಗೆ ಬಂದಿವೆ ಎಂದು ನರೇಗಲ್ಲ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಂಬಂಧಪಟ್ಟ ಆಸ್ತಿ ಮಾಲೀಕರು ನಿಗದಿತ ದರದಂತೆ ತೆರಿಗೆ ಪಾವತಿಸುವಂತೆ ಮನವಿ ಮಾಡಲಾಗಿದೆ.

## ಸ್ವಯಂ ಜನಗಣತಿ ನೋಂದಣಿ ಕಾರ್ಯಾಗಾರ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನಗಣತಿ 2026–27 ಸಂಬಂಧವಾಗಿ ಎಪ್ರಿಲ್ 01ರಿಂದ ಎಪ್ರಿಲ್ 15ರವರೆಗೆ ಕರ್ನಾಟಕದಲ್ಲಿ ಸ್ವಯಂ ಜನಗಣತಿ ಪ್ರಾರಂಭವಾಗಲಿದೆ.

ಈ ಹಿನ್ನೆಲೆಯಲ್ಲಿ ಜನಗಣತಿ ಸ್ವಯಂ ನೋಂದಣಿ ಕುರಿತು ಜಾಗೃತಿ ಮೂಡಿಸಲು ಎಪ್ರಿಲ್ 02ರಂದು ಬೆಳಿಗ್ಗೆ 10.00 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ವಿವಿಧ ಸಂಘ–ಸಂಸ್ಥೆಗಳ ಮುಖ್ಯಸ್ಥರು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಾಗಾರವನ್ನು ಯಶಸ್ವಿಗೊಳಿಸುವಂತೆ ಪ್ರಧಾನ ಜಿಲ್ಲಾ ಜನಗಣತಿ ಅಧಿಕಾರಿ ಹಾಗೂ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಶ್ವ ಜಲ ದಿನಾಚರಣೆ ಅಂಗವಾಗಿ ನಡೆದ ಜಾಗೃತಿ ಕಾರ್ಯಕ್ರಮದಲ್ಲಿ ಶ್ರೀಮತಿ ನಾಗವೇಣಿ

# ಜಲ ಸಂರಕ್ಷಣೆಗೆ ಒಗ್ಗೂಡೋಣ

**■ವಿಜಯಸಾಕ್ಷಿ ಸುದ್ದಿ, ಗದಗ**

"ನೀರಿದ್ದರೆ ಜೀವ, ಜೀವನ" ಎಂಬ ಸಂದೇಶವನ್ನು ಅರಿತು ಪ್ರತಿಯೊಬ್ಬರೂ ನೀರಿನ ಸಂರಕ್ಷಣೆಗೆ ಬದ್ಧರಾಗಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀಮತಿ ನಾಗವೇಣಿ ಹೇಳಿದರು.




ನಗರದ ಜಿಲ್ಲಾ ನ್ಯಾಯಾಲಯದ ಎರಡನೇ ಮಹಡಿಯ ವಿ.ಸಿ. ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ವಾಟರ್ ಫಾರ್ ವಾಯ್ಸ್ ಲೆಸ್ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ವಿಶ್ವ ಜಲ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ಮನೆಯ ಮುಂಭಾಗದಲ್ಲಿ ಪ್ರಾಣಿ–ಪಕ್ಷಿಗಳಿಗಾಗಿ ತೆಂಗಿನ ಚಿಪ್ಪು ಅಥವಾ ಪಾತ್ರೆಗಳಲ್ಲಿ ನೀರು ಇಡುವ ಅಭ್ಯಾಸ ಬೆಳೆಸಿಕೊಳ್ಳಬೇಕು. ನೀರು ಮಾನವರಿಗೆ ಮಾತ್ರವಲ್ಲ, ಪ್ರಾಣಿ–ಪಕ್ಷಿಗಳ ಬದುಕಿಗೂ ಅತ್ಯಾವಶ್ಯಕವಾಗಿದ್ದು, ಅವುಗಳ ಸಂರಕ್ಷಣೆಯೂ ನಮ್ಮ ಹೊಣೆಗಾರಿಕೆಯಾಗಿದೆ ಎಂದು ತಿಳಿಸಿದರು. ನೀರಿನ ಕೊರತೆ ಕುರಿತು ಜಾಗೃತಿ ಮೂಡಿಸಿ ಅದರ ಅಪವ್ಯಯವನ್ನು ತಡೆಯಬೇಕು. ಮಳೆ ನೀರು ಸಂಗ್ರಹಣೆ ಸೇರಿದಂತೆ ವಿವಿಧ ಕ್ರಮಗಳನ್ನು ಅನುಸರಿಸುವ ಮೂಲಕ ನೀರಿನ ಸಂರಕ್ಷಣೆ ಸಾಧ್ಯ ಎಂದು ಹೇಳಿದರು. ರೈತರು ತಮ್ಮ ಜಮೀನಿನಲ್ಲಿ ಕೃಷಿ ಹೊಂಡಗಳನ್ನು ನಿರ್ಮಿಸಿ ಬೆಳೆಗಳಿಗೆ ಹಾಗೂ ಪ್ರಾಣಿಗಳಿಗೆ ನೀರು ಒದಗಿಸುವ ಕಾರ್ಯಕ್ಕೆ ಮುಂದಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಆರ್.ಜಿ. ಕಲ್ಲೂರ ಅವರು ಮಾತನಾಡಿ, ನೀರಿನ ಮಹತ್ವವನ್ನು ನಿರಂತರ ಜಾಗೃತಿಯ ಮೂಲಕ ಸಾರಬೇಕಾಗಿದೆ. ಇಂದಿನ ಪರಿಸ್ಥಿತಿಯಲ್ಲಿ ನೀರನ್ನು ಖರೀದಿಸುವ ಮಟ್ಟಕ್ಕೆ ತಲುಪಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಹೇಳಿದರು. ವಾಟರ್ ಫಾರ್ ವಾಯ್ಸ್ ಲೆಸ್ ಸಂಸ್ಥೆಯ ಸಂಸ್ಥಾಪಕ ಜೈನ್ ಸನ್ನಿ ಹಸ್ತಿಮಲ್ ಅವರು ಪಿಪಿಟಿ ಪ್ರಸ್ತುತಿಯ ಮೂಲಕ ನೀರಿನ ಕೊರತೆ, ಅದರ ಪರಿಣಾಮಗಳು ಹಾಗೂ ಪರಿಹಾರ ಕ್ರಮಗಳ ಬಗ್ಗೆ ವಿವರಿಸಿದರು. ನೀರಿನ ಕೊರತೆಯಿಂದ ಪ್ರಾಣಿ–ಪಕ್ಷಿಗಳು ವಲಸೆ ಹೋಗುವ ಪರಿಸ್ಥಿತಿ ಎದುರಾಗುತ್ತಿದೆ. ಕಾಡುಪ್ರಾಣಿಗಳು ನೀರಿಗಾಗಿ ಗ್ರಾಮಗಳಿಗೆ ಬರುತ್ತಿರುವುದನ್ನು ಉದಾಹರಣೆಗಳೊಂದಿಗೆ ವಿವರಿಸಿದರು.

> "ನೀರಿನ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ; ಅದು ಮಾನವ ಮಾತ್ರವಲ್ಲ, ಪ್ರಾಣಿ–ಪಕ್ಷಿಗಳ ಬದುಕಿಗೂ ಅವಶ್ಯಕ"
> – **ಶ್ರೀಮತಿ ನಾಗವೇಣಿ,** ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಿಗೆ ಪ್ರಾಣಿ–ಪಕ್ಷಿಗಳಿಗಾಗಿ ನೀರು ಇಡುವ ಮಣ್ಣಿನ ಪಾತ್ರೆಗಳನ್ನು ವಾಟರ್ ಫಾರ್ ವಾಯ್ಸೆಸ್ ಸಂಸ್ಥೆಯಿಂದ ವಿತರಿಸಲಾಯಿತು.

ಒಂದು ಆಕಳಿಗೆ ದಿನಕ್ಕೆ ಸುಮಾರು 40 ಲೀಟರ್ ನೀರು ಅಗತ್ಯವಿದ್ದು, ನೀರಿನ ಕೊರತೆಯಿಂದ ವಿವಿಧ ರೋಗಗಳು ಉಂಟಾಗುತ್ತವೆ. ಗರ್ಭಿಣಿ ಪ್ರಾಣಿಗಳು ನೀರಿನ ಅಭಾವದಿಂದ ಹೆಚ್ಚಿನ ಸಂಕಷ್ಟ ಅನುಭವಿಸುತ್ತವೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಗಂಗಾಧರ ಸಿ.ಎಂ., ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಕು. ಗೀತಾ ಶಿಂಧೆ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿಜೆಎಂ ಗಿರಿಮಲ್ಲಪ್ಪ ಆರ್. ಶೆಟ್ಟರ್, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪದ್ಮಶ್ರೀ ಆರ್. ಪಾಟೀಲ, ದ್ವಿತೀಯ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಬೀರಪ್ಪ ಕಾಂಬಳೆ, ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಎಂ.ಎ. ಸಂಗನಾಳ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಸಾರ್ವಜನಿಕ ಸಂಪರ್ಕ ಅಧಿಕಾರಿ ಖಿಮಿ ಸನ್ನಿ ಜೈನ್, ಅರಿಹಂತ ಸುರೇಶಕುಮಾರ್ ಜೈನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಗಾಳಿ ವಿದ್ಯುತ್ ಯೋಜನೆ ವಾಹನಗಳಿಂದ ರಸ್ತೆ ಹಾನಿ ಆರೋಪ; ಅಧಿಕಾರಿಗಳ ಸ್ಪಷ್ಟನೆಗೆ ಆಗ್ರಹ

# ಭಾರೀ ವಾಹನ ಸಂಚಾರಕ್ಕೆ ರೈತರ ತಡೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಯಳವತ್ತಿ ಗ್ರಾಮದಿಂದ ಲಕ್ಷ್ಮೇಶ್ವರ ಪಟ್ಟಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಗಾಳಿ ವಿದ್ಯುತ್ ಯಂತ್ರ ನಿರ್ಮಾಣ ಕಾಮಗಾರಿಗೆ ಸಂಬಂಧಿಸಿದ ಭಾರೀ ಗಾತ್ರದ ವಾಹನಗಳ ಸಂಚಾರವನ್ನು ತಡೆದು ರೈತರು ಪ್ರತಿಭಟನೆ ನಡೆಸಿದ ಘಟನೆ ಮಂಗಳವಾರ ನಡೆದಿದೆ.



ಈ ವೇಳೆ ರೈತ ಮುಖಂಡರಾದ ಬಾಪು ಭರಮಗೌಡರ, ಸುರೇಶ ಬೀರಣ್ಣವರ, ರಾಚನಗೌಡ ಅಜ್ಜನಗೌಡರ ಮಾತನಾಡಿ, ಸುಮಾರು ಮೂರ್ನಾಲ್ಕು ವರ್ಷಗಳ ಹಿಂದೆ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಸುಮಾರು 7 ಕೋಟಿ ರೂ. ವೆಚ್ಚದಲ್ಲಿ ಈ ರಸ್ತೆ ನಿರ್ಮಾಣಗೊಂಡಿದೆ. ಗ್ರಾಮಸ್ಥರ ಸಾಕಷ್ಟು ಪ್ರಯತ್ನದ ಫಲವಾಗಿ ನಿರ್ಮಾಣವಾದ ಈ ರಸ್ತೆ ಕೃಷಿ ಚಟುವಟಿಕೆಗಳಿಗೆ ಬಹಳ ಅನುಕೂಲವಾಗಿದೆ ಎಂದರು.

ಆದರೆ ಗಾಳಿ ವಿದ್ಯುತ್ ಯಂತ್ರ ಸ್ಥಾಪನೆಗೆ ಸಂಬಂಧಿಸಿದ ಕಂಪನಿಗಳು ಹಗಲು–ರಾತ್ರಿ ಭಾರೀ ಯಂತ್ರೋಪಕರಣಗಳು ಹಾಗೂ ಸಾಮಗ್ರಿಗಳನ್ನು ಸಾಗಿಸುತ್ತಿದ್ದು, ಇದರಿಂದ ರಸ್ತೆ ಹಾನಿಗೊಳಗಾಗುತ್ತಿದೆ. ಕೇವಲ 10 ಟನ್ ಸಾಮರ್ಥ್ಯ ಇರುವ ರಸ್ತೆಯಲ್ಲಿ 50–60 ಟನ್ ಭಾರದ ವಾಹನಗಳು ಸಂಚರಿಸುತ್ತಿರುವುದು ಗಂಭೀರ ಸಮಸ್ಯೆ ಎಂದು ಹೇಳಿದರು.

ರಸ್ತೆ ಹಾಳಾದರೆ ಕೃಷಿ ಚಟುವಟಿಕೆಗಳಿಗೆ ಬಳಸುವ ಟ್ರ್ಯಾಕ್ಟರ್ ಸೇರಿದಂತೆ ವಾಹನಗಳ ಸಂಚಾರಕ್ಕೂ ತೊಂದರೆಯಾಗಲಿದೆ. ಕೃಷಿಯನ್ನೇ ನಂಬಿಕೊಂಡು ಬದುಕುತ್ತಿರುವ ರೈತರಿಗೆ ಇದು ದೊಡ್ಡ ಹೊಡೆತವಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

> "ರಸ್ತೆ ಹಾಳಾದರೆ ನಮ್ಮ ಕೃಷಿಯೇ ಸಂಕಷ್ಟಕ್ಕೆ ಸಿಲುಕುತ್ತದೆ; ಸಮಸ್ಯೆ ಪರಿಹಾರವಾಗುವವರೆಗೂ ಹೋರಾಟ ಮುಂದುವರಿಯುತ್ತದೆ"
> **– ರೈತ ಮುಖಂಡರು.**

ಈ ಬಗ್ಗೆ ಕಂದಾಯ, ಸಾರಿಗೆ, ಜಿಪಂ ಹಾಗೂ ಗ್ರಾಮ ಪಂಚಾಯಿತಿ ಅಧಿಕಾರಿಗಳು ಜವಾಬ್ದಾರಿಯಿಂದ ವರ್ತಿಸದೆ ನಿರ್ಲಕ್ಷ್ಯ ತೋರಿಸುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಬಂದು ಸ್ಪಷ್ಟನೆ ನೀಡುವವರೆಗೂ ಭಾರೀ ವಾಹನ ಸಂಚಾರಕ್ಕೆ ಅವಕಾಶ ನೀಡುವುದಿಲ್ಲ ಎಂದು ರೈತರು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಉಮೇಶ್ ಜೋಶಿ, ಫಕ್ಕೀರೇಶ ಜವಳಿ, ವಸಂತಗೌಡ ಬಾಗೇವಾಡಿ, ಹುಸೇನಸಾಬ ಮಸೂತಿ, ನಾಗಪ್ಪ ಹೂಗಾರ, ಶಿವಣ್ಣ ಗಡಿಯಣ್ಣವರ, ಬಸವರಾಜ ನೀಲಗುಂದ, ಚನ್ನಪ್ಪಗೌಡ ನಿಂಗನಗೌಡ್ರ, ರಾಜಪ್ಪ ಬ್ಯಾಟಿ, ಉದಯ ಹೂಗಾರ, ಬಸವರಾಜ ಗಡೆಣ್ಣವರ, ರುದ್ರಗೌಡ ಪಾಟೀಲ, ಖಾದರಸಾಬ ಸೇರಿದಂತೆ ಹಲವರು ಭಾಗವಹಿಸಿದರು.

ಈ ವೇಳೆ ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಿಸಿ ಶಾಂತಿ ಕಾಪಾಡಿದರು.

### ಯುವ ಕಾಂಗ್ರೆಸ್ ಕಾರ್ಯಕಾರಿಣಿ ಸಭೆಯಲ್ಲಿ ಕೃಷ್ಣಗೌಡ ಹೆಚ್. ಪಾಟೀಲ ಅಭಿಮತ

## ಯುವಕರಿಗೆ ಉದ್ಯೋಗಾವಕಾಶಗಳನ್ನು ತಲುಪಿಸುವ ಸಂಕಲ್ಪ ಮಾಡೋಣ

**■ವಿಜಯಸಾಕ್ಷಿ ಸುದ್ದಿ, ಗದಗ**

ಯುವಕರಿಗೆ ಉದ್ಯೋಗಾವಕಾಶಗಳನ್ನು ಅವರ ಮನೆಬಾಗಿಲಿಗೆ ತಲುಪಿಸುವ ಸಂಕಲ್ಪ ಮಾಡೋಣ. ಇದು ಯುವಕರ ಭವಿಷ್ಯ ನಿರ್ಮಾಣ ಹಾಗೂ ಆರ್ಥಿಕ ಅಭಿವೃದ್ಧಿಗೆ ಮಹತ್ವದ ಹೆಜ್ಜೆಯಾಗಲಿದೆ ಎಂದು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಹೆಚ್. ಪಾಟೀಲ ಹೇಳಿದರು. ನಗರದ ಕಾಟನ್ ಸೇಲ್ ಸೊಸೈಟಿಯಲ್ಲಿ ನಡೆದ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಕಾರ್ಯಕಾರಿಣಿ ಸಭೆಯಲ್ಲಿ ಅವರು ಮಾತನಾಡಿದರು. ಕರ್ನಾಟಕ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಜನರಿಗೆ, ವಿಶೇಷವಾಗಿ ಮಹಿಳೆಯರಿಗೆ ಆರ್ಥಿಕ ಸಬಲೀಕರಣ ನೀಡಿವೆ.

ಈ ಯೋಜನೆಗಳ ಬಗ್ಗೆ ಪ್ರತಿಯೊಬ್ಬರಿಗೂ ತಿಳಿಸುವ ಕೆಲಸ ನಡೆಯಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿವೇಕ ಯಾವಗಲ್ಲ, ಕರ್ನಾಟಕ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿಗಳು ರವಿ ಕಿರಣ ಮತ್ತು ಕೀರ್ತಿರಾಜ, ರಾಜ್ಯ ಪ್ರಧಾನ ಕಾರ್ಯದರ್ಶಿ ಉದಯ ವೀರನಗೌಡರ, ಗದಗ–ಬೆಟಗೇರಿ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಅನ್ವರ ನದಾಫ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.




### ಜಗಜೀವನರಾಂ ಮತ್ತು ಅಂಬೇಡ್ಕರ್ ಜಯಂತಿ ಆಚರಣೆಗೆ ಅಗತ್ಯ ಕ್ರಮ: ತಹಸೀಲ್ದಾರ್ ಕೆ. ರಾಘವೇಂದ್ರ ರಾವ್

# ಅರ್ಥಪೂರ್ಣ ಜಯಂತಿ ಆಚರಣೆಗೆ ತಾಲೂಕಾಡಳಿತ ಸಜ್ಜು



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಎಪ್ರಿಲ್ 5ರಂದು ಡಾ. ಬಾಬು ಜಗಜೀವನರಾಂ ಅವರ 119ನೇ ಹಾಗೂ ಎಪ್ರಿಲ್ 14ರಂದು ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ತಾಲೂಕಾಡಳಿತದಿಂದ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಹಸೀಲ್ದಾರ್ ಕೆ. ರಾಘವೇಂದ್ರ ರಾವ್ ತಿಳಿಸಿದ್ದಾರೆ.

ಶಿರಹಟ್ಟಿ ತಹಸೀಲ್ದಾರ್ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಪ್ರಿಲ್ 5ರಂದು ಜಗಜೀವನರಾಂ ಜಯಂತಿಯನ್ನು ಎಲ್ಲಾ ಸರ್ಕಾರಿ ಕಚೇರಿಗಳು, ಶಾಲೆಗಳು ಹಾಗೂ ಕಾಲೇಜುಗಳಲ್ಲಿ ಆಚರಿಸಲು ಈಗಾಗಲೇ ಸೂಚಿಸಲಾಗಿದೆ ಎಂದರು.

ಎಪ್ರಿಲ್ 14ರಂದು ಅಂಬೇಡ್ಕರ್ ಜಯಂತಿ ಅಂಗವಾಗಿ ಶ್ರೀ ಜ. ಫಕೀರೇಶ್ವರ ಮಠದಿಂದ ಭಾವಚಿತ್ರ ಮೆರವಣಿಗೆ ಆರಂಭವಾಗಿ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ತಹಸೀಲ್ದಾರ್ ಕಚೇರಿ ಆವರಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಭಾಗವಹಿಸಲಿವೆ ಎಂದು ತಿಳಿಸಿದರು.

ಈ ಎರಡೂ ಮಹನೀಯರ ಜಯಂತಿ ದಿನದಂದು ಎಲ್ಲಾ ಇಲಾಖೆಗಳ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗಬೇಕು. ಸಭೆಗೆ ಗೈರಾಗಿದ್ದ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

> "ಮಹನೀಯರ ಜಯಂತಿಗಳನ್ನು ಕೇವಲ ಆಚರಣೆಗಷ್ಟೇ ಸೀಮಿತಗೊಳಿಸದೆ, ಅರ್ಥಪೂರ್ಣವಾಗಿ ಆಚರಿಸುವುದು ಎಲ್ಲರ ಜವಾಬ್ದಾರಿ"
> **– ಕೆ. ರಾಘವೇಂದ್ರ ರಾವ್,** ತಹಸೀಲ್ದಾರ್, ಶಿರಹಟ್ಟಿ.

ಸಭೆಯಲ್ಲಿ ಮಾತನಾಡಿದ ಮುಖಂಡರಾದ ಜಾನು ಲಮಾಣಿ, ಮೋಹನ ಗುತ್ತೆಮ್ಮನವರ, ನಾಗರಾಜ ಲಕ್ಕುಂಡಿ, ಮುತ್ತುರಾಜ ಭಾವಿಮನಿ ಅವರು, ಪೂರ್ವಭಾವಿ ಸಭೆಯ ಮಾಹಿತಿ ಮುಂಚಿತವಾಗಿ ನೀಡಿದ್ದರೂ ಅಧಿಕಾರಿಗಳು ಪೂರ್ಣ ಪ್ರಮಾಣದಲ್ಲಿ ಹಾಜರಾಗದಿರುವುದನ್ನು ಖಂಡಿಸಿ, ಇಂತಹವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಜೊತೆಗೆ ತಾಲೂಕಿನ ಎಲ್ಲಾ ಶಾಲೆಗಳು, ಕಾಲೇಜುಗಳು, ಅಂಗನವಾಡಿ ಕೇಂದ್ರಗಳು ಹಾಗೂ ಸರ್ಕಾರಿ ಕಚೇರಿಗಳಲ್ಲಿ ಜಯಂತಿಗಳನ್ನು ಕಡ್ಡಾಯವಾಗಿ ಆಚರಿಸುವಂತೆ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ತಾಪಂ ಇಒ ಆರ್.ವಿ. ದೊಡ್ಡಮನಿ, ಪಿಎಸ್ಐ ಈರಪ್ಪ ರಿತ್ತಿ, ಸಮಾಜ ಕಲ್ಯಾಣಾಧಿಕಾರಿ ಗೋಪಾಲ ನಾಯ್ಕ, ಎಂ.ಎಸ್. ಸಂಕನೂರ, ಬಿಇಒ ಎಚ್.ಎನ್. ನಾಯ್ಕ, ಟಿಎಚ್ಒ ಡಾ. ಸುಭಾಸ್ ದೈಗೊಂಡ, ಸಿಡಿಪಿಒ ಮೃತ್ಯುಂಜಯ ಗುಡ್ಡದಾನ್ವೇರಿ, ವಲಯ ಅರಣ್ಯಾಧಿಕಾರಿ ರಾಮಪ್ಪ ಪೂಜಾರ, ಶಿವಪ್ಪ ಹದ್ಲಿ, ಶಿವನಗೌಡ ಪಾಟೀಲ, ಬಸವರಾಜ ನಾಯ್ಕರ, ಪ್ರಕಾಶ ಬಡೆಣ್ಣವರ, ಮಲ್ಲೇಶ ತಳವಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಹೊರಗುತ್ತಿಗೆ ಸಿಬ್ಬಂದಿ ಸೇವೆ ಮುಂದುವರಿಕೆ ಕುರಿತು ನಕಲಿ ಆದೇಶ: ಸರ್ಕಾರದ ಸ್ಪಷ್ಟನೆ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸರ್ಕಾರದಲ್ಲಿ ಹೊರಗುತ್ತಿಗೆ ಆಧಾರಿತ ಸಿಬ್ಬಂದಿಯ ಸೇವೆಯನ್ನು ಮುಂದುವರೆಸುವ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಆದೇಶ ನಕಲಿಯಾಗಿದೆ ಎಂದು ಆರ್ಥಿಕ ಇಲಾಖೆ ಸ್ಪಷ್ಟಪಡಿಸಿದೆ.

ಆರ್ಥಿಕ ಇಲಾಖೆಯ ಅಧಿಕೃತ ಜ್ಞಾಪನದ ಮಾದರಿಯಲ್ಲಿ, ಸಂ. ಆಇ/ಸೇನಿ/08/2026 ದಿನಾಂಕ 24-03-2026 ಎಂದು ಉಲ್ಲೇಖಿಸಿ, ಅನಧಿಕೃತವಾಗಿ ನಕಲಿ ಜ್ಞಾಪನ ಪತ್ರವನ್ನು ಸೃಷ್ಟಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡಲಾಗಿದೆ. ಕೆಲವು ಮಾಧ್ಯಮಗಳು ಹಾಗೂ ಆನ್‌ಲೈನ್ ವೇದಿಕೆಗಳು ನೈಜತೆ ಪರಿಶೀಲಿಸದೆ ಈ ಮಾಹಿತಿಯನ್ನು ಪ್ರಕಟಿಸಿರುವುದಾಗಿ ತಿಳಿದು ಬಂದಿದೆ.

ಸರ್ಕಾರವು ಈ ಸಂಬಂಧ ಯಾವುದೇ ಆದೇಶ ಅಥವಾ ಅಧಿಕೃತ ಜ್ಞಾಪನ ಪತ್ರವನ್ನು ಹೊರಡಿಸಿಲ್ಲ. ಈ ಕುರಿತು ಹರಿದಾಡುತ್ತಿರುವ ಪತ್ರ ಸಂಪೂರ್ಣ ನಕಲಿಯಾಗಿದ್ದು, ಅಧಿಕೃತವಾಗಿಲ್ಲ ಎಂದು ಆರ್ಥಿಕ ಇಲಾಖೆಯ ಅಧೀನ ಕಾರ್ಯದರ್ಶಿ ಎಂ. ರಾಜಮ್ಮ ಪ್ರಕಟಣೆಯ ಮೂಲಕ ಸ್ಪಷ್ಟಪಡಿಸಿದ್ದಾರೆ.

ಸಾರ್ವಜನಿಕರು ಹಾಗೂ ಮಾಧ್ಯಮಗಳು ಇಂತಹ ಸುದ್ದಿಗಳನ್ನು ನಂಬುವ ಮುನ್ನ ಅಧಿಕೃತ ಮೂಲಗಳಿಂದ ಪರಿಶೀಲಿಸುವಂತೆ ಮನವಿ ಮಾಡಲಾಗಿದೆ.



ಗದಗ: ಜಿಲ್ಲೆಯ ಗಜೇಂದ್ರಗಡ ತಾಲೂಕಿನ ಮುಶಿಗೇರಿ ಗ್ರಾಮದಲ್ಲಿ ಮಂಗಳವಾರ ರಾತ್ರಿ ಗದುಗಿನ ಗುರು ಶಿವಯೋಗಿ ಪುಟ್ಟರಾಜ ಕಲಾ ಬಳಗ ಅಣ್ಣ ಕರಿಲಿಲ್ಲ ತಂಗಿ ಬರಲಿಲ್ಲ ನಾಟಕದ ನಿರ್ದೇಶಕ ವಿಜಯಾನಂದ ಹಾಗೂ ಜ್ಯೂನಿಯರ್ ವಿಷ್ಣುವರ್ಧನ್ ಅವರನ್ನು ಪ್ಯಾಟಿ ಗ್ರಾಮದ ಸಂಕ್ರಪ್ಪಜ್ಜನವರು ಸನ್ಮಾನಿಸಿದರು. ರಾಜಶೇಖರ ಮಾಲಗಿತ್ತಿ, ಕೆ.ಎ.ಹಾದಿಮನಿ, ಪುಟ್ಟರಾಜ ಗೆಳೆಯರ ಬಳಗದ ಸದಸ್ಯರು ಇದ್ದರು.


# ವೈಚಾರಿಕತೆಯ ವೇದಿಕೆಯಾದ ತೋಂಟದಾರ್ಯ ಮಹೋತ್ಸವ

## ಸಮಾನತೆ, ಸೌಹಾರ್ದತೆ, ಶಿಕ್ಷಣ ಮತ್ತು ಸೇವೆಯ ಮೌಲ್ಯಗಳನ್ನು ಜೀವಂತಗೊಳಿಸಿದ ಜಾತ್ರೆ

ಗದಗದ ತೋಂಟದಾರ್ಯ ಮಠವು ಸಮಾನತೆ, ವೈವಿಧ್ಯತೆಯಲ್ಲಿ ಏಕತೆ ಮತ್ತು ಶರಣ ತತ್ವದ ಮೌಲ್ಯಗಳನ್ನು ಜನಮನದಲ್ಲಿ ಬಿತ್ತಿದ ವೈಚಾರಿಕ ಕೇಂದ್ರವಾಗಿದೆ. ಇಲ್ಲಿ ನಡೆಯುವ ಜಾತ್ರಾ ಮಹೋತ್ಸವ ಕೇವಲ ಆಚರಣೆಗಷ್ಟೇ ಸೀಮಿತವಾಗದೆ, ಸಮಾಜಮುಖಿ ಚಿಂತನೆ, ಮಾನವೀಯ ಮೌಲ್ಯಗಳು ಮತ್ತು ಸಮಾನತೆಯ ಸಂದೇಶವನ್ನು ಸಾರುವ ವೇದಿಕೆಯಾಗಿ ರೂಪುಗೊಂಡಿದೆ.

ಲಿಂಗೈಕ್ಯ ಪೂಜ್ಯ ಜಗದ್ಗುರು ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ಚಿಂತನೆಗಳು ಬಸವಾದಿ ಶಿವಶರಣರ ವಚನಗಳ ಸಾರವನ್ನು ಒಳಗೊಂಡಿದ್ದವು. ಅವರು ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ, ಕೃಷಿ ಮತ್ತು ಸಾಹಿತ್ಯ ಕ್ಷೇತ್ರಗಳಲ್ಲಿ ಮಹತ್ತರ ಬದಲಾವಣೆಗಳನ್ನು ತಂದವರು. ರೈತರ ಸಂಕಷ್ಟಗಳಿಗೆ ಮಿಡಿದ ಹೃದಯ, ಕನ್ನಡ ನಾಡು-ನುಡಿಗೆ ಹೋರಾಟ, ಪರಿಸರ ಸಂರಕ್ಷಣೆ, ಮಹಿಳಾ ಸಬಲೀಕರಣ-ಇವೆಲ್ಲವೂ ಅವರ ಜೀವನದ ಅವಿಭಾಜ್ಯ ಅಂಗಗಳಾಗಿದ್ದವು. "ಎಲ್ಲರೂ ನಮ್ಮವರು" ಎಂಬ ಶರಣ ತತ್ವವನ್ನು ಬದುಕಿನಲ್ಲಿ ಅಳವಡಿಸಿಕೊಂಡು ಸಮಾನತೆಯ ಸಂದೇಶವನ್ನು ಸಮಾಜಕ್ಕೆ ತಲುಪಿಸಿದ ಮಹನೀಯರು.

ಈ ಪರಂಪರೆಯನ್ನು ಮುಂದುವರಿಸುತ್ತಿರುವ ಜಗದ್ಗುರು ತೋಂಟದ ಡಾ. ಸಿದ್ದರಾಮ ಮಹಾಸ್ವಾಮಿಗಳು ಶ್ರೀಮಠವನ್ನು ವೈಚಾರಿಕತೆ ಮತ್ತು ಕೋಮು ಸೌಹಾರ್ದತೆಯ ತಾಣವನ್ನಾಗಿ ಮುನ್ನಡೆಸುತ್ತಿದ್ದಾರೆ. ಭಕ್ತರನ್ನು ಮಕ್ಕಳಂತೆ ಕಾಣುವ ಅವರ ಮಾತೃವಾತ್ಸಲ್ಯ, ಸಮಾಜಮುಖಿ ಕಾರ್ಯಕ್ರಮಗಳಿಗೆ ನೀಡುವ ಉತ್ತೇಜನ ಈ ಜಾತ್ರೆಯ ವೈಶಿಷ್ಟ್ಯವನ್ನು ಮತ್ತಷ್ಟು ಹೆಚ್ಚಿಸಿದೆ.




ಈ ವರ್ಷದ ಜಾತ್ರಾ ಮಹೋತ್ಸವವು ವಿದ್ಯಾರ್ಥಿಗಳು ಮತ್ತು ಮಹಿಳೆಯರನ್ನು ಕೇಂದ್ರವಾಗಿಟ್ಟುಕೊಂಡು ವೈವಿಧ್ಯಮಯ ಚಟುವಟಿಕೆಗಳನ್ನು ಒಳಗೊಂಡಿದೆ. ವಚನ ಕಂಠಪಾಠ, ವಚನ ನೃತ್ಯ, ಚಿತ್ರಕಲೆ ಸ್ಪರ್ಧೆಗಳು ವಿದ್ಯಾರ್ಥಿಗಳಲ್ಲಿ ಶರಣರ ತತ್ವಗಳ ಅರಿವು ಮೂಡಿಸಿದರೆ, ಮಹಿಳೆಯರಿಗಾಗಿ ವಚನ ಸಾಹಿತ್ಯ ಪರಿಚಯ, ವಚನ ಗಾಯನ, ಸಿರಿ ಧಾನ್ಯ ಹಾಗೂ ಸಾಂಪ್ರದಾಯಿಕ ಅಡುಗೆ ಸ್ಪರ್ಧೆಗಳು ಅವರ ಸೃಜನಶೀಲತೆಯನ್ನು ಅನಾವರಣಗೊಳಿಸಿವೆ. ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಭಾಗವಹಿಸಿರುವುದು ಜಾತ್ರೆಯ ವಿಶೇಷತೆಯನ್ನು ಸಾರುತ್ತದೆ. ಉಚಿತ ಆರೋಗ್ಯ ತಪಾಸಣಾ ಮತ್ತು ರಕ್ತಪರೀಕ್ಷಾ ಶಿಬಿರಗಳು ಜನರಲ್ಲಿ ಆರೋಗ್ಯ ಜಾಗೃತಿಯನ್ನು ಹೆಚ್ಚಿಸಿವೆ. ಖ್ಯಾತ ವೈದ್ಯರು ಭಾಗವಹಿಸಿ ಸೇವೆ ಸಲ್ಲಿಸಿದ್ದು, ಸಮಾಜಮುಖಿ ಕಾರ್ಯಗಳ ಬದ್ಧತೆಯನ್ನು ತೋರಿಸುತ್ತದೆ. ಜೊತೆಗೆ ಯುವಜನರಲ್ಲಿ ವ್ಯಸನಮುಕ್ತ ಸಮಾಜ ನಿರ್ಮಾಣದ ಸಂದೇಶ ಸಾರುವ ಪಾದಯಾತ್ರೆ ಜಾತ್ರೆಯ ಮತ್ತೊಂದು ಪ್ರಮುಖ ಅಂಶವಾಗಿದೆ.

ತ್ರಿವಿಧ ದಾಸೋಹದ ಪರಂಪರೆ, ಭಕ್ತರ ಸೇವಾಭಾವ ಮತ್ತು "ಎಲ್ಲರೂ ನಮ್ಮವರು" ಎಂಬ ಮಾನವೀಯತೆಯ ಅನಾವರಣ ಜಾತ್ರೆಯ ಜೀವಾಳವಾಗಿದೆ. ಇಲ್ಲಿ ಜಾತಿ-ಮತ-ಪಂಥ ಭೇದವಿಲ್ಲದೆ ಎಲ್ಲರೂ ಒಂದೇ ಕುಟುಂಬದವರಂತೆ ಸೇರಿಕೊಳ್ಳುವುದು ಈ ಮಹೋತ್ಸವದ ಅತ್ಯಂತ ದೊಡ್ಡ ಸಂದೇಶವಾಗಿದೆ.

ಎಪ್ರಿಲ್ 1ರಂದು ಪ್ರಾರಂಭೋತ್ಸವ, ಎಪ್ರಿಲ್ 2ರಂದು ಮಹಾರಥೋತ್ಸವ ಮತ್ತು ಲಘುರಥೋತ್ಸವ, ಎಪ್ರಿಲ್ 4ರಂದು ಮಂಗಲೋತ್ಸವ ನಡೆಯಲಿದ್ದು, ಪ್ರತಿದಿನ ವಚನ ಗಾಯನ, ನೃತ್ಯ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಸಾಧಕರ ಸನ್ಮಾನ ಜರುಗಲಿವೆ.

ಒಟ್ಟಾರೆ, ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವವು ಧಾರ್ಮಿಕ ಆಚರಣೆ ಮಾತ್ರವಲ್ಲ, ಅದು ವೈಚಾರಿಕತೆ, ಸಮಾನತೆ, ಮಾನವೀಯತೆ ಮತ್ತು ಕನ್ನಡ ಸಂಸ್ಕೃತಿಯ ಮೌಲ್ಯಗಳನ್ನು ಸಾರುವ ಜೀವಂತ ಹಬ್ಬವಾಗಿದೆ.



**-ಪ್ರೊ. ಸುಧಾ ಹುಚ್ಚಣ್ಣವರ**
ಉಪಾಧ್ಯಕ್ಷರು, ಜಾತ್ರಾ ಮಹೋತ್ಸವ ಕಮಿಟಿ

# ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರಗಳ ಮಹಿಳೆಯರಿಗೆ ಸನ್ಮಾನ

## ಮಹಿಳೆಯರು ಸ್ವಾವಲಂಬಿಗಳಾದಾಗ ಮಾತ್ರ ಬದುಕಿನ ಸಾರ್ಥಕತೆ



"ಹೆಣ್ಣು ಅಬಲೆಯಲ್ಲ, ಸಬಲೆ; ಶಿಕ್ಷಣ ಮತ್ತು ಸ್ವಾವಲಂಬನೆಯಿಂದಲೇ ಸಮಾನತೆ ಸಾಧ್ಯ"
– ಡಾ. ಸಾಹಿರಾಬಾನು.

ಈ ಸಂದರ್ಭದಲ್ಲಿ ಅಮ್ಮ ಸಂಸ್ಥೆಯ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ ಮಹಿಳೆಯರನ್ನು ಶಾಲು ಹೊದಿಸಿ ಸನ್ಮಾನಿಸಲಾಯಿತು. ರಾಷ್ಟ್ರೋತ್ಥಾನ ಶಾಲೆಯಲ್ಲಿ ಆಯಾ ಕೆಲಸ ಮಾಡಿ ನಿವೃತ್ತರಾದ ಮಂಗಳಮ್ಮ (ಗಂಡ: ಗುರುವಪ್ಪ), ಹಲವು ವರ್ಷಗಳಿಂದ ಪುರಸಭೆಯಲ್ಲಿ ಪೌರಕಾರ್ಮಿಕಳಾಗಿ ಸೇವೆ ಸಲ್ಲಿಸುತ್ತಿರುವ ಸುಂಕಮ್ಮ, ಅಂಗನವಾಡಿ ಕಾರ್ಯಕರ್ತೆಯರಾದ ಮಹೇಶ್ವರಿ, ಗೀತ, ಆಶಾ ಕಾರ್ಯಕರ್ತೆ ಮುದ್ದಕ್ಕ ಹಾಗೂ ಟೇಲರ್ ಬಾನುಬಿ ಅವರನ್ನು ಗೌರವಿಸಲಾಯಿತು.

■ **ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಆಧುನಿಕ ದಿನಮಾನಗಳಲ್ಲಿ ಮಹಿಳೆಯರು ಸ್ವಾವಲಂಬಿಗಳಾದಾಗ ಮಾತ್ರ ಬದುಕಿನ ಸಾರ್ಥಕತೆ ದೊರೆಯುತ್ತದೆ ಎಂದು ಅಮ್ಮ ಗ್ರಾಮೀಣ ಹಾಗೂ ನಗರಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷರಾದ ಡಾ. ಸಾಹಿರಾಬಾನು ಹೇಳಿದರು.

ಪಟ್ಟಣದ ಸೋನಿಯಾ ನಗರದ 14ನೇ ವಾರ್ಡ್‌ನಲ್ಲಿ ಆಯೋಜಿಸಲಾದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹಿಂದಿನ ಕಾಲದಲ್ಲಿ ಮಹಿಳೆಯರಿಗೆ ಶಿಕ್ಷಣದ ಹಕ್ಕು ಇರಲಿಲ್ಲ. ಹೀಗಾಗಿ ಅವರು ಕೇವಲ ಮನೆಯ ಕೆಲಸಗಳಿಗೆ ಸೀಮಿತವಾಗಿದ್ದರು. ಆದರೆ ಇಂದಿನ ಕಾಲದಲ್ಲಿ ಮಹಿಳೆಯರು ಶಿಕ್ಷಣ ಪಡೆದು ಸ್ವಾವಲಂಬಿ ಬದುಕು ನಡೆಸುತ್ತಿದ್ದಾರೆ.

ಆದರೂ ಗ್ರಾಮೀಣ ಪ್ರದೇಶಗಳಲ್ಲಿ ಇನ್ನೂ ಮಹಿಳೆಯರು ಅಬಲೆಯಾಗಿ ಕಾಣಿಸಿಕೊಳ್ಳುತ್ತಿರುವುದು ದುರಂತಕರ. ಹೆಣ್ಣು ಅಬಲೆಯಲ್ಲ, ಸಬಲೆ ಎಂಬುದನ್ನು ಸಮಾಜಕ್ಕೆ ತೋರಿಸಬೇಕಿದೆ ಎಂದು ಹೇಳಿದರು.

ಮಹಿಳೆಯರು ಶಿಕ್ಷಣ ಹೊಂದುವ ಮೂಲಕ ಲಿಂಗ ತಾರತಮ್ಯ ಎಂಬ ಸಾಮಾಜಿಕ ಪಿಡುಗನ್ನು ನಿರ್ಮೂಲನೆ ಮಾಡಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಅಮ್ಮ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಶಿಯಾ ಬೇಗಂ, ನಿರ್ದೇಶಕರಾದ ರೇಷ್ಮಾ ಸಿಖಂದರ್, ನಜ್ಮಾ, ರೇಣುಕಾ, ಬಿ. ಮಾಲನ್, ಗಿರಿಜಾ, ಯಶೋಧಾ, ಸುಧಾ, ಲಕ್ಷ್ಮೀ, ಹುಲಿಗೆಮ್ಮ, ಜ್ಯೋತಿ, ಫಾತಿಮಾ, ವಸಂತಮ್ಮ ಹಾಗೂ ವಸಿಯಾ ಉಪಸ್ಥಿತರಿದ್ದರು.

# ಭರದಿಂದ ಸಾಗಿದ 'ದುಡ್ಡಿನ ಆಟ ಬಲ್ಲವರಾರು' ಚಿತ್ರದ ಚಿತ್ರೀಕರಣ



■ **ವಿಜಯಸಾಕ್ಷಿ ಸುದ್ದಿ, ಶ್ರೀರಂಗಪಟ್ಟಣ**

ಮೈಸೂರ್ ಫಿಲಂ ಮೇಕರ್ಸ್ ಅವರ ಚೊಚ್ಚಲ ಕನ್ನಡ ಸಿನಿಮಾ 'ದುಡ್ಡಿನ ಆಟ ಬಲ್ಲವರಾರು' ಚಿತ್ರದ ಮುಹೂರ್ತ ಶ್ರೀರಂಗಪಟ್ಟಣದ ಶ್ರೀ ಗುಂಜ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದಲ್ಲಿ ನಡೆದಿದ್ದು ಮೊದಲ ಹಂತದ ಚಿತ್ರೀಕರಣ ಭರದಿಂದ ಸಾಗುತ್ತಿದೆ.

ಗೋಲ್ಡ್ ಸುರೇಶ ಕ್ಯಾಮೆರಾ ಆನ್ ಮಾಡುವ ಮೂಲಕ ಚಿತ್ರೀಕರಣಕ್ಕೆ ಚಾಲನೆ ನೀಡಿದರು. ಲತಾ ಮೋಹನ್ ಕ್ಲಾಪ್ ಮಾಡಿ ಚಿತ್ರತಂಡಕ್ಕೆ ಶುಭ ಹಾರೈಸಿದರು.


ಚಿತ್ರದ ಚಿತ್ರೀಕರಣ ಶ್ರೀರಂಗಪಟ್ಟಣ, ಮಂಡ್ಯ, ಮೈಸೂರಿನ ಸುತ್ತಮುತ್ತ ಎರಡು ಹಂತಗಳಲ್ಲಿ ನಡೆಯಲಿದೆ. ಒಂದು ಮಧ್ಯಮ ವರ್ಗದ ಕುಟುಂಬದಲ್ಲಿ ದುಡ್ಡು ಇಲ್ಲದಿರುವಾಗ ಮತ್ತು ದುಡ್ಡಿದ್ದಾಗ ಬದುಕಿನಲ್ಲಾಗುವ ಏರುಪೇರುಗಳು, ನೋವು-ನಲಿವುಗಳು, ಕೊನೆಗೆ ದುಡ್ಡಿನಿಂದ ಆಗುವ ಒಳಿತು-ಕೆಡಕುಗಳನ್ನು ಸಮಾಜಕ್ಕೆ ತಿಳಿಸುವಂತಹ ಚಲನಚಿತ್ರ. 'ದುಡ್ಡಿದ್ದರೆ ಜಗವೆಲ್ಲ, ದುಡ್ಡೇ ದೊಡ್ಡಪ್ಪ' ಎಂಬುದು ಚಿತ್ರದ ಸಾರವಾಗಿದೆ.

ಚಿತ್ರದಲ್ಲಿ ಒಟ್ಟು ನಾಲ್ಕು ಹಾಡುಗಳು ಮತ್ತು ಒಂದು ಫೈಟ್ ಇದ್ದು, ಗ್ರಾಮೀಣ ಹಿನ್ನೆಲೆ ಹೊಂದಿರುವ ಸನ್ನಿವೇಶವಾಗಿದೆ ಎಂದು ನಿರ್ದೇಶಕರು ತಿಳಿಸಿದರು.

ಚಿತ್ರದ ಮುಖ್ಯ ಪಾತ್ರದಲ್ಲಿ ಎಂಜಿಎನ್ ಪ್ರಸಾದ್, ಸೌಮ್ಯಮಲ್ಲಿಕ್, ಎಸ್ ಕೆ ಬಾಬು, ಸುಪ್ರಿಯಾ ರೆಡ್ಡಿ, ಲೋಕೇಶ್ ಕುಮಾರ್, ಶಂಕರ್ ಮಂಡ್ಯ, ಆನಂದ್, ಅಭಯ್, ಶಿವನಂಜು, ಲತಾ ಶೇಖರಿ, ಮಂಜುಳಾ, ರುದ್ರೇಗೌಡ, ಗುರುಮೂರ್ತಿ, ನಾರಾಯಣಸ್ವಾಮಿ, ಸಿದ್ದಲಿಂಗ, ವಿನೋದ್, ಪ್ರೇಮ, ಆನಂದ್, ರವಿ, ಪ್ರಕೃತಿ, ಪಲ್ಲವಿ, ವೆಂಕಟೇಶ್ ಪ್ರಸಾದ್ ಮುಂತಾದ ಕಲಾವಿದರು ಅಭಿನಯಿಸುತ್ತಿದ್ದಾರೆ.

# ಸಿರಿಧಾನ್ಯಗಳಿಂದ ಆರೋಗ್ಯ ವೃದ್ಧಿ

## ತೋಂಟದಾರ್ಯ ಜಾತ್ರೆ ಅಂಗವಾಗಿ ಮಹಿಳೆಯರು, ವಿದ್ಯಾರ್ಥಿಗಳಿಗೆ ವಿಶೇಷ ಕಾರ್ಯಕ್ರಮಗಳು



ಈ ಸಂದರ್ಭದಲ್ಲಿ ಮಹಿಳೆಯರಿಗಾಗಿ ವಚನ ಗಾಯನ, ವಚನಕಾರ್ತಿಯರ ವೇಷಭೂಷಣ ಸ್ಪರ್ಧೆ, ಸಿರಿಧಾನ್ಯ ಅಡುಗೆ ಸ್ಪರ್ಧೆ ಹಾಗೂ ಮರೆತು ಹೋದ ಖಾದ್ಯಗಳ ಅಡುಗೆ ಸ್ಪರ್ಧೆಗಳು ನಡೆದವು. ವಚನ ಗಾಯನ ಮತ್ತು ವೇಷಭೂಷಣ ಸ್ಪರ್ಧೆಗೆ ಶ್ರೀಮತಿ ಗೌರಕ್ಕ ಬಡಿಗಣ್ಣವರ್, ಅಡುಗೆ ಸ್ಪರ್ಧೆಗೆ ಡಾ. ಸುವರ್ಣ ನಿಡುಗುಂದಿ ಅವರು ನಿರ್ಣಾಯಕರಾಗಿ ಭಾಗವಹಿಸಿ ತೀರ್ಪು ನೀಡಿದರು.

■ **ವಿಜಯಸಾಕ್ಷಿ ಸುದ್ದಿ, ಗದಗ**

ಆಧುನಿಕ ಜೀವನದಲ್ಲಿ ಆರೋಗ್ಯ ಕಾಪಾಡಿಕೊಳ್ಳುವುದು ಅತ್ಯಂತ ಅಗತ್ಯವಾಗಿದ್ದು, ನಮ್ಮ ಸಾಂಪ್ರದಾಯಿಕ ಸಿರಿಧಾನ್ಯಗಳಿಂದ ಆರೋಗ್ಯ ವೃದ್ಧಿ ಸಾಧ್ಯ ಎಂದು ನಿವೃತ್ತ ಶಿಕ್ಷಣಾಧಿಕಾರಿ ಐ.ಬಿ. ಬೆನಕೊಪ್ಪ ಹೇಳಿದರು.

ನಗರದ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ಮಂಗಳವಾರ ನಡೆದ ತೋಂಟದಾರ್ಯ ಜಾತ್ರಾ ಮಹೋತ್ಸವದ ಅಂಗವಾಗಿ ಮಹಿಳೆಯರಿಗಾಗಿ ಏರ್ಪಡಿಸಲಾದ ವಿಶೇಷ ಸ್ಪರ್ಧೆಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಚನ ಸಾಹಿತ್ಯವು ಸಮಾನತೆಯನ್ನು ಸಾರುವ ಮಹತ್ವದ ಸಾಹಿತ್ಯವಾಗಿದ್ದು, ವಚನಕಾರ್ತಿಯರ ವಿಚಾರಗಳನ್ನು ತಿಳಿಯುವ ಹಾಗೂ ಮಹಿಳೆಯರಲ್ಲಿರುವ ಸಾಮರ್ಥ್ಯಗಳನ್ನು ಹೊರತರುವ ವೇದಿಕೆಯಾಗಿದೆ ಎಂದರು. ಜೊತೆಗೆ ಸಿರಿಧಾನ್ಯಗಳು ಆರೋಗ್ಯ ವೃದ್ಧಿಗೆ ಸಹಾಯಕವಾಗಿದ್ದು, ನಮ್ಮ ಹಿರಿಯರು ಅನುಸರಿಸಿದ ಆಹಾರ ಪದ್ಧತಿಗಳು ಸದೃಢ ಆರೋಗ್ಯಕ್ಕೆ ಪೂರಕವಾಗಿದ್ದವು ಎಂದು ತಿಳಿಸಿದರು.

ಜಾತ್ರಾ ಸಮಿತಿಯ ಉಪಾಧ್ಯಕ್ಷರಾದ ಶ್ರೀಮತಿ ಸುಧಾ ಹುಚ್ಚಣ್ಣವರ ಮಾತನಾಡಿ, ಈ ಬಾರಿಯ ಜಾತ್ರಾ ಮಹೋತ್ಸವದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಮಹಿಳೆಯರಿಗಾಗಿ ಸೃಜನಶೀಲ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿರುವುದು ಕಾರ್ಯಕ್ರಮದ ಯಶಸ್ಸಿಗೆ ಸಾಕ್ಷಿಯಾಗಿದೆ ಎಂದರು.

ಅತಿಥಿಯಾಗಿ ಆಗಮಿಸಿದ ಶರಣೆ ರತ್ನಕ್ಕ ಪಾಟೀಲ್ ಮಾತನಾಡಿ, ಶರಣರ ತತ್ವಗಳನ್ನು ಇಂದಿನ ಸಮಾಜದಲ್ಲಿ ಹರಡುವ ಪ್ರಯತ್ನ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿವಯ್ಯ ನಾಲ್ವತ್ವಾಡಮಠ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಪ್ರಕಾಶ ಅಸುಂಡಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಸುಭಾಷ್ ಚನ್ನಪ್ಪನವರ್, ಎಂ.ಜಿ. ಹೂಗಾರ್, ಎಸ್.ವಿ. ಪವಾಡಿಗೌಡ್ರು, ಉಮೇಶ್ ಗೌಡ ಎಸ್. ಪಾಟೀಲ್, ಯಲ್ಲೂಸಾ ಹಬೀಬ್, ವೀರಣ್ಣ ಗಡಗಿ, ಶಿವಲೀಲಾ ಅಕ್ಕಿ, ಪುಷ್ಪಾ ಭಂಡಾರಿ, ಸುಜಾತ ಕಾಡಪ್ಪನವರ್, ಗಿರಿಜಾ ಹಸಬಿ, ಸುರೇಖಾ ಪಿಳ್ಳಿ, ಶ್ರೀದೇವಿ ಶೆಟ್ಟರ್, ಅಕ್ಕಮಹಾದೇವಿ ಚಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಶ್ರೀಮತಿ ವಿದ್ಯಾ ಗಂಜಿಹಾಳ ನಿರೂಪಿಸಿದರು.

# ಶಿಕ್ಷಕರು ಸಮಾಜದ ಭವಿಷ್ಯ ರೂಪಿಸುವ ಶಿಲ್ಪಿಗಳು

## ಸೇವಾ ನಿವೃತ್ತಿ ಶಿಕ್ಷಕರಿಗೆ ಅಭಿನಂದನಾ ಸಮಾರಂಭದಲ್ಲಿ ಕುಲಪತಿ ಪಿ.ಎಲ್. ಪಾಟೀಲ್



"ಶಿಕ್ಷಕರು ಕೇವಲ ಬೋಧಕರು ಅಲ್ಲ; ಅವರು ಸಮಾಜದ ಭವಿಷ್ಯ ರೂಪಿಸುವ ಶಿಲ್ಪಿಗಳು"
– ಕುಲಪತಿ ಪಿ.ಎಲ್. ಪಾಟೀಲ್

ಹಾವೇರಿ ತಾಲೂಕಿನ ನೆಗಳೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಹೆಣ್ಣುಮಕ್ಕಳ ಶಾಲೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಶಿಕ್ಷಕರಾದ ಶ್ರೀಮತಿ ಎಸ್.ಜಿ. ಪಾಟೀಲ (ಹಿರೇಮಠ), ಎಂ.ಡಿ. ಹಿರೇಮಠ ಹಾಗೂ ಎಂ.ಪಿ.ಎಸ್ ಪ್ರಭಾರಿ ಮುಖ್ಯ ಶಿಕ್ಷಕ ಆರ್.ಎಸ್. ಲಮಾಣಿ ಸೇರಿದಂತೆ ವರ್ಗಾವಣೆಗೊಂಡ ಮುಖ್ಯ ಶಿಕ್ಷಕ ಎಸ್.ಜಿ. ಹರವಿ ಅವರನ್ನು ಶಾಲಾ ಅಭಿವೃದ್ಧಿ ಸಮಿತಿ, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಸನ್ಮಾನಿಸಿದರು.

■ **ವಿಜಯಸಾಕ್ಷಿ ಸುದ್ದಿ, ಹಾವೇರಿ**

ಸಮಾಜದಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಪಿ.ಎಲ್. ಪಾಟೀಲ್ ಹೇಳಿದರು.

ಪಟ್ಟಣದ ಜಿಲ್ಲಾ ಗುರುಭವನದಲ್ಲಿ ರಾಣೆಬೆನ್ನೂರ ವ್ಹಿ.ಎಸ್. ಹಿರೇಮಠ ಟ್ರಸ್ಟ್ ಹಾಗೂ ನೆಗಳೂರು ಜಿ.ಎಫ್. ಹಿರೇಮಠ ಅವರ ಸಹಯೋಗದಲ್ಲಿ ಮಲೆನಾಡ ಗಾಂಧಿ ಗೋವಿಂದೇಗೌಡರ ಸ್ಮರಣೋತ್ಸವದ ಅಂಗವಾಗಿ ಜಿಲ್ಲೆಯ ಪ್ರಸಕ್ತ ಸಾಲಿನಲ್ಲಿ ಸೇವಾ ನಿವೃತ್ತಿ ಹೊಂದಿದ ಶಿಕ್ಷಕರಿಗೆ ಅಭಿನಂದನಾ ಸಮಾರಂಭವನ್ನು ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಶಿಕ್ಷಕರು ಕೇವಲ ಪಾಠ ಬೋಧಿಸುವವರಲ್ಲ, ಅವರು ಸಮಾಜದ ಭವಿಷ್ಯ ರೂಪಿಸುವ ಶಿಲ್ಪಿಗಳಾಗಿದ್ದಾರೆ. ವಿದ್ಯಾರ್ಥಿಗಳಲ್ಲಿ ಶಿಸ್ತಿನೊಂದಿಗೆ ಜ್ಞಾನ, ನೈತಿಕತೆ ಹಾಗೂ ಸಂಸ್ಕಾರಗಳನ್ನು ಬೆಳೆಸುವ ಮಹತ್ತರ ಜವಾಬ್ದಾರಿ ಶಿಕ್ಷಕರ ಮೇಲಿದೆ. ಒಬ್ಬ ಉತ್ತಮ ಶಿಕ್ಷಕ ಅನೇಕ ಉತ್ತಮ ವಿದ್ಯಾರ್ಥಿಗಳನ್ನು ರೂಪಿಸಿ, ಅವರ ಮೂಲಕ ದೇಶದ ಅಭಿವೃದ್ಧಿಗೆ ದಾರಿ ತೋರಿಸುತ್ತಾನೆ ಎಂದು ಹೇಳಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಕರು ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಗುಣಮಟ್ಟದ ಶಿಕ್ಷಣ ನೀಡಬೇಕು. ಶಿಕ್ಷಣದ ಜೊತೆಗೆ ಜೀವನ ಮೌಲ್ಯಗಳನ್ನು ಬೋಧಿಸುವುದು ಅಗತ್ಯವಾಗಿದೆ ಎಂದು ತಿಳಿಸಿದರು.

ನಗರಸಭೆಯ ಮಾಜಿ ಅಧ್ಯಕ್ಷ ಸಂಜೀವಕುಮಾರ ನೀರಲಗಿ ಮಾತನಾಡಿ, ಮಲೆನಾಡ ಗಾಂಧಿ ಎಂದು ಪ್ರಸಿದ್ಧರಾದ ಗೋವಿಂದೇಗೌಡರು ಶಿಕ್ಷಣ ಸಚಿವರಾಗಿ ಮಾಡಿದ ಕಾರ್ಯ ಶ್ಲಾಘನೀಯವಾಗಿದೆ. ಶಿಕ್ಷಕರಿಗೆ ಕೃತಜ್ಞತೆ ಸಲ್ಲಿಸುವ ಈ ಸಮಾರಂಭ ಇತರರಿಗೆ ಮಾದರಿಯಾಗಬೇಕು ಎಂದರು. ಶಿಕ್ಷಕ ವೃತ್ತಿ ಎಲ್ಲ ವೃತ್ತಿಗಳಿಗಿಂತ ಶ್ರೇಷ್ಠವಾಗಿದ್ದು, ವಿದ್ಯಾರ್ಥಿಗಳ ಜೀವನ ರೂಪಿಸುವಲ್ಲಿ ಮಹತ್ವದ ಪಾತ್ರವಹಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀಶೈಲದ ಶಿವಲಿಂಗೇಶ್ವರ ಸ್ವಾಮೀಜಿ, ಸಾಹಿತಿ ವಿ.ಎಸ್. ಚರಂತಿಮಠ, ಬಸಲಿಂಗಯ್ಯ ಹಿರೇಮಠ, ವಿ.ಎಸ್. ಹಿರೇಮಠ, ವಿ.ವಿ. ಮಠದ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸದಸ್ಯತ್ವ ನೋಂದಣಿಗೆ ಎಪ್ರಿಲ್ 4 ಕೊನೆಯ ದಿನ

**ಜಿಲ್ಲೆಯ 4 ತಾಲೂಕುಗಳ ಮಹಾಸಭಾ ಘಟಕಗಳಿಗೆ ಚುನಾವಣೆ**

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ (ರಿ) ಗದಗ ಜಿಲ್ಲೆಯ ನಾಲ್ಕು ತಾಲೂಕು ಘಟಕಗಳ ಚುನಾವಣೆಗೆ ಸಕಲ ಸಿದ್ಧತೆಗಳನ್ನು ಪೂರ್ಣಗೊಳಿಸಿದೆ ಎಂದು ಮಹಾಸಭಾದ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ತಿಳಿಸಿದ್ದಾರೆ.

ತಾಂತ್ರಿಕ ಕಾರಣಗಳಿಂದ ಮುಂದೂಡಲ್ಪಟ್ಟಿದ್ದ ಈ ಚುನಾವಣೆಗಳು ನರಗುಂದ, ಗಜೇಂದ್ರಗಡ, ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕು ಘಟಕಗಳಿಗೆ ಜರುಗಲಿವೆ. ಮಹಾಸಭೆಯ ಅಜೀವ ಸದಸ್ಯತ್ವ ಪಡೆಯಲು ಎಪ್ರಿಲ್ 4 ಕೊನೆಯ ದಿನವಾಗಿದ್ದು, ಎಪ್ರಿಲ್ 15 ರಂದು ತಾತ್ಕಾಲಿಕ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ. ಎಪ್ರಿಲ್ 23 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟವಾಗಲಿದೆ.

ನಾಮಪತ್ರ ಸಲ್ಲಿಕೆ ಎಪ್ರಿಲ್ 29 ರಂದು ಬೆಳಿಗ್ಗೆ 10:30ರಿಂದ ಆರಂಭವಾಗಲಿದೆ. ನಾಮಪತ್ರ ಸಲ್ಲಿಸಲು ಮೇ 6 ಮಧ್ಯಾಹ್ನ 3 ಗಂಟೆಯವರೆಗೆ ಅವಕಾಶ ಇರುತ್ತದೆ. ಮೇ 7 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಮೇ 10 ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಹಿಂತೆಗೆದುಕೊಳ್ಳಬಹುದು.

ಮೇ 24 ರಂದು ಬೆಳಿಗ್ಗೆ 8ರಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದ್ದು, ಅದೇ ದಿನ ಮತ ಎಣಿಕೆ ನಡೆಯಲಿದೆ ಎಂದು ಚುನಾವಣಾಧಿಕಾರಿಗಳು ಆದೇಶ ನೀಡಿರುವುದಾಗಿ ಮಹಾಸಭಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ ತಿಳಿಸಿದ್ದಾರೆ.

# ಸ್ವಯಂ ಪ್ರೇರಿತ ರಕ್ತದಾನ ಮಾನವೀಯತೆಯ ಅತ್ಯುನ್ನತ ಸೇವೆ

**ಅಗಡಿ ಮಹಾವಿದ್ಯಾಲಯದಲ್ಲಿ ರಕ್ತದಾನ ಶಿಬಿರ; 133 ಜನರಿಂದ ರಕ್ತದಾನ**



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸ್ವಯಂ ಪ್ರೇರಿತ ರಕ್ತದಾನ ಶಿಬಿರವು ಮಾನವೀಯತೆಯ ಅತ್ಯುನ್ನತ ಸೇವೆಯಾಗಿದ್ದು, ರಕ್ತವನ್ನು ಯಾವುದೇ ಕಾರ್ಖಾನೆಯಲ್ಲಿ ತಯಾರಿಸಲು ಸಾಧ್ಯವಿಲ್ಲ. ಮನುಷ್ಯನಿಂದ ಮಾತ್ರ ದೊರೆಯುವ ರಕ್ತದಾನವು ಜೀವ ಉಳಿಸುವ ಮಹಾದಾನವಾಗಿದೆ ಎಂದು ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಹೇಳಿದರು.

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಅಭಿಯಾಂತ್ರಿಕ ಹಾಗೂ ತಾಂತ್ರಿಕ ಮಹಾವಿದ್ಯಾಲಯದ ಸಂಸ್ಥಾಪಕ ಅಧ್ಯಕ್ಷರಾದ ದಿ. ವೆಂಕಪ್ಪ ಎಂ. ಅಗಡಿ ಅವರ 94ನೇ ಜನ್ಮದಿನದ ಅಂಗವಾಗಿ ಜಿಲ್ಲಾ ಆಸ್ಪತ್ರೆ, ಅಂಬಿಕಾ ರಕ್ತನಿಧಿ ಕೇಂದ್ರ, ಕಾಲೇಜಿನ ಎನ್‌ಎಸ್‌ಎಸ್ ಘಟಕ, ಉನ್ನತ ಭಾರತ ಅಭಿಯಾನ, ಯೂತ್ ರೆಡ್ ಕ್ರಾಸ್ ಹಾಗೂ ಅದ್ವಿತಾ ಲೇಡೀಸ್ ಕ್ಲಬ್ ಸಹಯೋಗದಲ್ಲಿ ಆಯೋಜಿಸಿದ್ದ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಒಬ್ಬ ರಕ್ತದಾನಿಯಿಂದ ಮೂವರು ಜೀವಗಳನ್ನು ಉಳಿಸಬಹುದು. ರಸ್ತೆ ಅಪಘಾತಗಳು, ಶಸ್ತ್ರಚಿಕಿತ್ಸೆಗಳು, ಗರ್ಭಿಣಿಯರು ಮತ್ತು ವಿವಿಧ ರೋಗಿಗಳಿಗೆ ತಕ್ಷಣ ರಕ್ತದ ಅವಶ್ಯಕತೆ ಉಂಟಾಗುತ್ತದೆ. ಇಂತಹ ಸಂದರ್ಭದಲ್ಲಿ ರಕ್ತದಾನಿಗಳು ಜೀವದಾತರಾಗುತ್ತಾರೆ ಎಂದು ಹೇಳಿದರು.

ದಿ. ವೆಂಕಪ್ಪ ಅಗಡಿ ಅವರು ಶಿಕ್ಷಣ, ಆರೋಗ್ಯ, ಉದ್ಯೋಗ ಹಾಗೂ ಸಾಮಾಜಿಕ ಸೇವೆಯಲ್ಲಿ ಮಹತ್ತರ ಕೊಡುಗೆ ನೀಡಿದ್ದು, ಅವರ ಸ್ಮರಣಾರ್ಥ ವಿದ್ಯಾರ್ಥಿಗಳು ಪ್ರತಿವರ್ಷ ರಕ್ತದಾನ ಶಿಬಿರ ಆಯೋಜಿಸುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಮಾತನಾಡಿ, ಮನುಷ್ಯನ ಬೇರೆ ಅಂಗಗಳನ್ನು ಕೃತಕವಾಗಿ ಸೃಷ್ಟಿಸಬಹುದು ಆದರೆ ರಕ್ತವನ್ನು ಮಾತ್ರ ಕೃತಕವಾಗಿ ಉತ್ಪಾದಿಸಲು ಸಾಧ್ಯವಿಲ್ಲ. ಆದ್ದರಿಂದ ರಕ್ತದಾನ ಅತ್ಯಂತ ಶ್ರೇಷ್ಠ ಕಾರ್ಯವಾಗಿದೆ ಎಂದರು. ಆರೋಗ್ಯವಂತ ಯುವಕರು ರಕ್ತದಾನ ಮಾಡುವ ಮೂಲಕ ಜೀವದಾನ ಮಾಡುವ ಪರಮೋನ್ನತ ಸೇವೆಗೆ ಮುಂದಾಗಬೇಕು ಎಂದು ಕರೆ ನೀಡಿದರು.

> "ರಕ್ತದಾನವು ಜೀವ ಉಳಿಸುವ ಮಹಾದಾನ; ಪ್ರತಿಯೊಬ್ಬ ಆರೋಗ್ಯವಂತ ಯುವಕರು ಇದರಲ್ಲಿ ಭಾಗಿಯಾಗಬೇಕು"
>
> – **ಡಾ. ಬಸವರಾಜ ಬೊಮ್ಮನಹಳ್ಳಿ**, ನಿರ್ದೇಶಕರು, ಜಿಮ್ಸ್

ಸಂಸ್ಥೆಯ ಅಧ್ಯಕ್ಷರಾದ ಹರ್ಷವರ್ಧನ ವಿ. ಅಗಡಿ ಅವರ ಸಂದೇಶದಲ್ಲಿ, ಭಾರತೀಯ ಸೇನೆಯ ಹುತಾತ್ಮ ಯೋಧರ ಮಕ್ಕಳಿಗೆ 2026-27ನೇ ಶೈಕ್ಷಣಿಕ ವರ್ಷದಿಂದ ವಸತಿ ಸಹಿತ ಉಚಿತ ತಾಂತ್ರಿಕ ಶಿಕ್ಷಣ ನೀಡುವ ಯೋಜನೆ ಜಾರಿಗೊಳಿಸಲಾಗುವುದು ಎಂದು ತಿಳಿಸಲಾಯಿತು.

ಈ ವೇಳೆ ನಿವೃತ್ತ ಯೋಧರಾದ ಯೋಗೇಶ್ ಹಿರೇಮಠ, ಚನ್ನಬಸಪ್ಪ ಹುಡೇದ, ಎಚ್.ಡಿ. ಸಂಜೀವಣ್ಣವರರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಅಗಡಿ ಸನ್‌ರೈಸ್ ಆಸ್ಪತ್ರೆಯ ಡಾ. ರಾಜಶೇಖರ ಮೂಲಿಮನಿ, ಡಾ. ಸುಜಾತಾ ಸಂಗೂರ, ಡಾ. ವಾಣಿ ಶಿವಪುರ, ಪ್ರೊ. ವಿಕ್ರಂ ಶಿರೋಳ, ಡಾ. ಸುಭಾಷ್ ಮೇಟಿ, ಪಿಯು ಕಾಲೇಜಿನ ಪ್ರಾಚಾರ್ಯ ಶುಭಾ ಡಿ., ರವಿಪ್ರಕಾಶ್, ಎನ್‌ಎಸ್‌ಎಸ್ ಅಧಿಕಾರಿ ಪ್ರೊ. ಸೋಮಶೇಖರ ಕೆರಿಮನಿ, ಕಿರಣ ಕೋತಿನ, ರಾಜೇಶ್ವರಿ ಗಾಮನಗಟ್ಟಿ, ಗೀತಾ ಬ್ಯಾಟಿ, ಡಾ. ಗಿರೀಶ್ ಯತ್ತಿನಹಳ್ಳಿ, ಡಾ. ಸಂತೋಷ್ ಬುಜರಿ, ಡಾ. ಶಿವರಾಜ ಹಿರೇಮಠ, ಎಸ್. ಎನ್. ಗೊಂದಕರ, ದಯಾನಂದ ಬಡಿಗಣ್ಣವರ, ಎಸ್.ಎಫ್. ಕೊಡ್ಲಿ, ಷಣ್ಮುಖ ಜಿ., ಸೋಮು ನವಲಗುಂದ ಸೇರಿದಂತೆ ಮಹಾವಿದ್ಯಾಲಯದ ಸಿಬ್ಬಂದಿ ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಒಟ್ಟು 133 ಜನ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿದರು.

# ಮೊಬೈಲ್ ಮೂಲಕ ಸ್ವಯಂ ಗಣತಿ ದಾಖಲಿಸಿದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರ ಸರ್ಕಾರ ಹಮ್ಮಿಕೊಂಡಿರುವ ಜನಗಣತಿ 2027ರ ಅಂಗವಾಗಿ ಪರಿಚಯಿಸಲಾದ ಸ್ವಯಂ ಗಣತಿ ವ್ಯವಸ್ಥೆಯಡಿ, ರಾಜ್ಯದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಬುಧವಾರ ತಮ್ಮ ಮೊಬೈಲ್ ಮೂಲಕ ಸ್ವಯಂ ಗಣತಿ ದಾಖಲಾತಿಯನ್ನು ಪೂರ್ಣಗೊಳಿಸಿದರು.

ಎಪ್ರಿಲ್ 1ರಿಂದ 15ರವರೆಗೆ ಎಲ್ಲಾ ನಾಗರಿಕರು ಅಧಿಕೃತ ಪೋರ್ಟಲ್, e.census.gov.in ಮೂಲಕ ತಮ್ಮ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ದಾಖಲಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು.



"ನಮ್ಮ ಜನಗಣತಿ – ನಮ್ಮ ಅಭಿವೃದ್ಧಿ" ಎಂಬ ಧ್ಯೇಯವಾಕ್ಯದೊಂದಿಗೆ ಸರ್ಕಾರ ಜನಗಣತಿ 2027 ಅನ್ನು ಹಮ್ಮಿಕೊಂಡಿದ್ದು, ಇದರ ಭಾಗವಾಗಿ ಸ್ವಯಂ ಗಣತಿ ವ್ಯವಸ್ಥೆಯನ್ನು ಪರಿಚಯಿಸಲಾಗಿದೆ. ಈ ಪ್ರಕ್ರಿಯೆ ಸರಳ ಹಾಗೂ ಸುರಕ್ಷಿತವಾಗಿದ್ದು, ಮೊಬೈಲ್ ಸಂಖ್ಯೆ ಮತ್ತು OTP ಮೂಲಕ ಕೇವಲ 5ರಿಂದ 10 ನಿಮಿಷಗಳಲ್ಲಿ ಪೂರ್ಣಗೊಳಿಸಬಹುದಾಗಿದೆ ಎಂದು ಅವರು ತಮ್ಮ ಅನುಭವ ಹಂಚಿಕೊಂಡರು. ಪ್ರಕ್ರಿಯೆ ಪೂರ್ಣಗೊಂಡ ನಂತರ ದೊರೆಯುವ ನೋಂದಣಿ ಸಂಖ್ಯೆಯನ್ನು ಎಪ್ರಿಲ್ 16ರಿಂದ ಮೇ 15ರವರೆಗೆ ಮನೆಮನೆಗೆ ಭೇಟಿ ನೀಡುವ ಗಣತಿದಾರರಿಗೆ ನೀಡಿದಲ್ಲಿ, ಗಣತಿದಾರರು ತ್ವರಿತವಾಗಿ ಗಣತಿಯನ್ನು ಪೂರ್ಣಗೊಳಿಸಲು ಹಾಗೂ ಅಗತ್ಯವಿದ್ದಲ್ಲಿ ತಿದ್ದುಪಡಿ ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಮೊಬೈಲ್ ಅಥವಾ ಕಂಪ್ಯೂಟರ್ ಸೌಲಭ್ಯವಿಲ್ಲದವರು ಸಮೀಪದ ಕಂಪ್ಯೂಟರ್ ಕೇಂದ್ರಗಳು ಅಥವಾ ಸ್ನೇಹಿತರ ಮೊಬೈಲ್ ಬಳಸಿ ಮಾಹಿತಿ ಸಲ್ಲಿಸಿ ನೋಂದಣಿ ಸಂಖ್ಯೆ ಪಡೆಯಬಹುದು ಎಂದು ಸಲಹೆ ನೀಡಿದರು.

> "ಜನಗಣತಿ ಕೇವಲ ಕರ್ತವ್ಯವಲ್ಲ– ಇದು ಕರ್ನಾಟಕದ ಅಭಿವೃದ್ಧಿಗೆ ನಿಮ್ಮ ಮಹತ್ವದ ಕೊಡುಗೆ. ನಿಖರ ಮಾಹಿತಿ ನಾಳೆಯ ಉತ್ತಮ ನೀತಿಗಳಿಗೆ ಆಧಾರವಾಗುತ್ತದೆ"
>
> – **ಡಾ. ಶಾಲಿನಿ ರಜನೀಶ್.**

ಜನಗಣತಿ ನಮ್ಮ ರಾಜ್ಯ ಮತ್ತು ದೇಶದ ಭವಿಷ್ಯ ರೂಪಿಸುವ ಮಹತ್ವದ ಕಾರ್ಯವಾಗಿದ್ದು, ಆರೋಗ್ಯ, ಶಿಕ್ಷಣ, ವಸತಿ ಹಾಗೂ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಸಮರ್ಪಕ ಸಂಪನ್ಮೂಲ ಹಂಚಿಕೆಗೆ ಇದು ಸಹಕಾರಿಯಾಗುತ್ತದೆ. ನಿಖರ ಮಾಹಿತಿಯ ಮೂಲಕ ಉತ್ತಮ ನೀತಿಗಳು ಮತ್ತು ಸೇವೆಗಳು ರೂಪುಗೊಳ್ಳುತ್ತವೆ ಎಂದು ಹೇಳಿದರು.

ನಿಗದಿತ ಅವಧಿಯಲ್ಲಿ ಸ್ವಯಂ ಗಣತಿಯನ್ನು ಪೂರ್ಣಗೊಳಿಸಿ, ಜನಗಣತಿ 2027 ಯಶಸ್ವಿಗೊಳಿಸಲು ಎಲ್ಲರೂ ಕೈಜೋಡಿಸಬೇಕು ಎಂದು ನಾಗರಿಕರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜನಗಣತಿ ನಿರ್ದೇಶಕ ರಾಮಚಂದ್ರನ್ ಅವರು ಮುಖ್ಯ ಕಾರ್ಯದರ್ಶಿಗಳಿಗೆ ಸ್ವಯಂ ಗಣತಿ ವ್ಯವಸ್ಥೆಯ ಕುರಿತು ವಿವರವಾದ ಮಾಹಿತಿ ನೀಡಿದರು.

# ಧರ್ಮ ಪರಿಪಾಲನೆಯಿಂದ ಸದ್ಗತಿ ಹೊಂದಬೇಕು

**ಶ್ರೀ ಭಗವಾನ ಮಹಾವೀರ ಸ್ವಾಮಿಯ ಜನ್ಮಕಲ್ಯಾಣಕ ಮಹೋತ್ಸವ**




■ ವಿಜಯಸಾಕ್ಷಿ ಸುದ್ದಿ, ಗದಗ

ಸತ್ಯ, ಶಾಂತಿ, ಅಹಿಂಸಾ ಧರ್ಮ ಪಾಲನೆಯ ಮೂಲಕ ಮನುಷ್ಯ ಸದ್ಗತಿಯನ್ನು ಹೊಂದಬೇಕೆಂದು ಪರಮಪೂಜ್ಯ ಆಚಾರ್ಯ ಭಗವಾನ್ ಶ್ರೀಮದ್ ವಿಜಯ್ ಚಂದ್ರಭೂಷಣ ಸೂರೀಶ್ವರ್ಜಿ ಹೇಳಿದರು.

ಗದುಗಿನ ಪಂಜರಪೋಳದ ಗೋಶಾಲೆಯಲ್ಲಿ ಶ್ರೀ ಮಹಾವೀರ ಗೋ ಸೇವಾ ಸಮಿತಿ ಏರ್ಪಡಿಸಿದ್ದ ಶ್ರೀ ಭಗವಾನ ಮಹಾವೀರ ಸ್ವಾಮಿಯ ಜನ್ಮಕಲ್ಯಾಣಕ ಮಹೋತ್ಸವ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಶ್ರದ್ಧೆ, ನಿಷ್ಠೆಯಿಂದ ಧರ್ಮದ ಹಾದಿಯಲ್ಲಿ ಮುನ್ನಡೆದರೆ ಧರ್ಮವು ನಮ್ಮನ್ನು ಸನ್ಮಾರ್ಗದೆಡೆಗೆ ಮುನ್ನಡೆಸುವುದು. ಮಾಡುವ ಕಾಯಕದಲ್ಲಿ ಸತ್ಯ ಮತ್ತು ಪ್ರಾಮಾಣಿಕತೆ ಇದ್ದರೆ ಅದು ಪರಿಶುದ್ಧ ಫಲ ನೀಡಬಲ್ಲದು. ಅಂತಹ ಪರಿಶುದ್ಧ ಕಾಯಕ ನಡೆಸಿ ಎಂದರು.

ಪರಮಪೂಜ್ಯ ಸಂಯಮ ಭೂಷಣ ವಿಜಯರಾಜ-ಜೀ ಮಾತನಾಡಿ, ಇಂದಿಲ್ಲಿ ಧರ್ಮ ಸಭೆಯಲ್ಲಿ ಭಕ್ತಿಯಿಂದ ಪಾಲ್ಗೊಂಡಿರುವ ಧರ್ಮಾಭಿಮಾನಿಗಳು ಅಹಿಂಸಾ ಪರಮೋಧರ್ಮ ತತ್ವವನ್ನು ಪರಿಪಾಲಿಸಬೇಕಲ್ಲದೆ ಧರ್ಮದ ಪಥದಲ್ಲಿ ಮುನ್ನಡೆದು ಮಾನವ ಜೀವನವನ್ನು ಸಾರ್ಥಕ ಮಾಡಿಕೊಳ್ಳಬೇಕು. ಧರ್ಮವಾಣಿ, ಧರ್ಮ ಶ್ರವಣ ಮುಖ್ಯವಾಗಿದ್ದು ಭಕ್ತಿಯಿಂದ ಪಾಲಿಸಬೇಕೆಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶ್ರೀ ಮಹಾವೀರ ಗೋ ಸೇವಾ ಸಮಿತಿಯ ಅಧ್ಯಕ್ಷ ಅಶೋಕ ಫುಲಾಮುಥಾ, ಗೋಶಾಲಾದ ಕಾರ್ಯವೈಖರಿ ಹಾಗೂ ಗೋ ಸೇವಾ ಸಮಿತಿಯ ಪದಾಧಿಕಾರಿಗಳು ಗೋ ಸೇವೆಯಲ್ಲಿ ಸಮರ್ಪಣಾ ಭಾವದಿಂದ ಕಾರ್ಯ ಮಾಡುತ್ತಿರುವದನ್ನು ತಿಳಿಸಿದರು. ವೇದಿಕೆಯ ಮೇಲೆ ಪೂಜ್ಯ ಸಾಧ್ವಿ ಕಾರುಣ್ಯ ಸುಧಾ ಶ್ರೀಜಿ, ಪೂಜ್ಯ ಸಾಧ್ವಿ ಇಂದುಪ್ರಭಾಜೀ ಅವರು ಉಪಸ್ಥಿತರಿದ್ದರು.

# ಬಡವರಿಗೆ ಆಶ್ರಯವಾದ ಉಚಿತ ಸಾಮೂಹಿಕ ವಿವಾಹ

**ಜಾತಿ-ಮತ ಭೇದವಿಲ್ಲದೆ 9 ಜೋಡಿಗಳ ವಿವಾಹ**







■ ವಿಜಯಸಾಕ್ಷಿ ಸುದ್ದಿ, ಡಂಬಳ

ತ್ರಿವಿಧ ದಾಸೋಹಿ ಶ್ರೀ ಹಾಲೇಶ್ವರ ಶರಣರು ಬಡವರಿಗಾಗಿ ಜಾತಿ, ಮತ, ಪಂಥ ಎನ್ನದೆ ಸರ್ವ ಸಮುದಾಯದ ಜನರನ್ನು ಒಗ್ಗೂಡಿಸಿಕೊಂಡು ನಡೆಸುವ ಉಚಿತ ಸಾಮೂಹಿಕ ವಿವಾಹಗಳು ಬಡವರಿಗೆ ಅನುಕೂಲವಾಗುತ್ತವೆ ಎಂದು ಕಲಕೇರಿ-ವಿರುಪಾಪೂರದ ಪರಮಪೂಜ್ಯ ಮುದುಕೇಶ್ವರ ಶಿವಾಚಾರ್ಯರು ಮಹಾಸ್ವಾಮಿಗಳು ಹೇಳಿದರು.

ಡಂಬಳ ಹೋಬಳಿಯ ಪೇಠಾ ಆಲೂರು ಗ್ರಾಮದ ಆರಾಧ್ಯ ದೇವರಾದ ಶ್ರೀ ಹಾಲೇಶ್ವರ ಕೃಪಾಪೋಷಿತ ಶಿವಯೋಗಾಶ್ರಮದ 48ನೇ ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ 9 ಜೋಡಿ ಸಾಮೂಹಿಕ ವಿವಾಹದಲ್ಲಿ ನೂತನ ವಧು-ವರರಿಗೆ ಆಶೀರ್ವಚನ ನೀಡಿ ಅವರು ಮಾತನಾಡಿದರು.

> "ಉಚಿತ ಸಾಮೂಹಿಕ ವಿವಾಹಗಳು ಬಡವರಿಗೆ ಆರ್ಥಿಕ ನೆರವಾಗುವುದರ ಜೊತೆಗೆ, ಸಮಾಜದಲ್ಲಿ ಸಾಮರಸ್ಯ ಮತ್ತು ಸಮಾನತೆ ಬೆಳೆಸುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ"
>
> – **ಪರಮಪೂಜ್ಯ ಮುದುಕೇಶ್ವರ ಶಿವಾಚಾರ್ಯರು.**

ತ್ರಿವಿಧ ದಾಸೋಹಿ ಶ್ರೀ ಹಾಲೇಶ್ವರ ಶರಣರು ಮಾತನಾಡಿ, ಸಮಾಜದಲ್ಲಿ ಅನಾವಶ್ಯಕವಾಗಿ ಖರ್ಚು ಮಾಡಿ ಮಾಡುವ ಮದುವೆಗಳಿಗಿಂತ ಸಾಮೂಹಿಕ ವಿವಾಹಗಳು ಉತ್ತಮ ಸಂಪ್ರದಾಯವಾಗಿದ್ದು, ಆರ್ಥಿಕವಾಗಿ ದುರ್ಬಲ ಕುಟುಂಬಗಳಿಗೆ ನೆರವಾಗುತ್ತವೆ ಎಂದರು. ನೂತನ ವಧು-ವರರು ದಾಂಪತ್ಯ ಜೀವನದಲ್ಲಿ ಪರಸ್ಪರ ಗೌರವ, ಸಹನೆ ಮತ್ತು ಪ್ರೀತಿ ಪಾಲಿಸಿಕೊಂಡು ಕುಟುಂಬ ಹಾಗೂ ಸಮಾಜದ ಮೌಲ್ಯಗಳನ್ನು ಉಳಿಸಿಕೊಂಡು ಬದುಕಬೇಕು ಎಂದು ಸಲಹೆ ನೀಡಿದರು.

ವಿರುಪಾಪೂರದ ಅಭಿನವ ಮುದುಕೇಶ್ವರ ಶಿವಾಚಾರ್ಯ ಶ್ರೀಗಳು ಮಾತನಾಡಿ, ಜಾತ್ರಾ ಮಹೋತ್ಸವ, ಧಾರ್ಮಿಕ ಸಭೆಗಳು ಹಾಗೂ ಸಾಮೂಹಿಕ ವಿವಾಹಗಳು ಸಮಾಜದಲ್ಲಿ ಸೌಹಾರ್ದತೆ, ಸಹೋದರತ್ವ ಮತ್ತು ಸಮಾನತೆ ಬೆಳೆಸುವಲ್ಲಿ ಮಹತ್ವದ ಪಾತ್ರವಹಿಸುತ್ತವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪೇಠಾ ಆಲೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಹಿರಿಯರು, ಯುವಕರು, ಮಹಿಳೆಯರು ಮತ್ತು ಜಾತ್ರಾ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ವಿಮೆ ಇದ್ದರೂ ಪರಿಹಾರವಿಲ್ಲ: ಮೆಣಸಿನಕಾಯಿ ರೈತರ ಆಕ್ರೋಶ!

**ಅನ್ಯಾಯ ಸರಿಪಡಿಸಲು ಸರ್ಕಾರಕ್ಕೆ ಒತ್ತಾಯ**

■ ವಿಜಯಸಾಕ್ಷಿ ಸುದ್ದಿ, ಗದಗ



2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ವಿಮೆ ತುಂಬಿದ ಗದಗ ಜಿಲ್ಲೆಯ ರೈತರಿಗೆ ಮಧ್ಯಂತರ ಪರಿಹಾರ ನೀಡುವಲ್ಲಿ ಅನ್ಯಾಯವಾಗಿದೆ ಎಂದು ಅಖಿಲ ಕರ್ನಾಟಕ ಕಿಸಾನ್ ಜಾಗೃತ ಸಂಘದ ಜಿಲ್ಲಾ ಅಧ್ಯಕ್ಷ ಯಲ್ಲಪ್ಪಗೌಡ ಕರಮಡಿ ಆರೋಪಿಸಿದ್ದಾರೆ.

ಅತಿಯಾದ ಮಳೆಯಿಂದ ಹೆಸರು, ಮೆಕ್ಕೆಜೋಳ, ಶೇಂಗಾ, ಈರುಳ್ಳಿ, ಸೂರ್ಯಕಾಂತಿ, ಹತ್ತಿ ಸೇರಿದಂತೆ ಹಲವು ಬೆಳೆಗಳು ಹಾನಿಗೊಳಗಾಗಿದ್ದು, ರೈತರು ಓರಿಯಂಟಲ್ ಇನ್ಸುರೆನ್ಸ್ ಕಂಪನಿಗೆ ದೂರು ಸಲ್ಲಿಸಿದ್ದರು. ಬಳಿಕ ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಜಂಟಿ-ಯಾಗಿ ಮಾದರಿ ಸಮೀಕ್ಷೆ ನಡೆಸಿ ಕೆಲವು ಬೆಳೆಗಳಿಗೆ ಮಧ್ಯಂತರ ಪರಿಹಾರ ನೀಡಲಾಗಿದೆ.

ಆದರೆ ಕೆಂಪು ಮೆಣಸಿನಕಾಯಿ ಬೆಳೆದ ಮತ್ತು ವಿಮೆ ತುಂಬಿದ ರೈತರಿಗೆ ಮಾತ್ರ ಯಾವುದೇ ಪರಿಹಾರ ನೀಡದಿರುವುದು ರೈತರಲ್ಲಿ ಆತಂಕ ಹಾಗೂ ಅಸಮಾಧಾನ ಉಂಟು ಮಾಡಿದೆ. ಇತರ ಬೆಳೆಗಳಿಗೆ ಪರಿಹಾರ ನೀಡಿದರೆ, ಮೆಣಸಿನಕಾಯಿ ರೈತರಿಗೆ ನೀಡದಿರುವುದು ಸ್ಪಷ್ಟ ಅನ್ಯಾಯವಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಪೂರ್ವ ಮುಂಗಾರು ಅವಧಿಯಲ್ಲಿ ಮಳೆಯ ಏರುಪೇರುಗಳಿಂದ ಕೆಲ ರೈತರು ಪುನಃ ಬಿತ್ತನೆ ಮಾಡಬೇಕಾದ ಪರಿಸ್ಥಿತಿ ಎದುರಿಸಿದ್ದಾರೆ. ಜೊತೆಗೆ ಬೆಳೆ ಸಮೀಕ್ಷೆ ವೇಳೆ ಜಿಪಿಎಸ್ ದಾಖಲೆಗಳಲ್ಲಿ ತಾಂತ್ರಿಕ ದೋಷಗಳು ಉಂಟಾಗಿ, ಹಲವಾರು ಸರ್ವೆ ನಂಬರುಗಳು ಆಪ್‌ನಲ್ಲಿ ತೆರೆ-ಯದೇ ಇರುವುದರಿಂದ ನಿಜವಾದ ಬೆಳೆ ಮಾಹಿತಿ ದಾಖಲೆಯಾಗಿಲ್ಲ. ಇದರಿಂದ ರೈತರಿಗೆ ಹೆಚ್ಚಿನ ಅನ್ಯಾಯವಾಗುತ್ತಿದೆ ಎಂದು ತಿಳಿಸಿದ್ದಾರೆ.

ಸಚಿವರಾದ ಎಚ್.ಕೆ. ಪಾಟೀಲರು ಹಾಗೂ ಜಿಲ್ಲಾಧಿಕಾರಿಗಳು ಈ ವಿಚಾರದಲ್ಲಿ ತಕ್ಷಣ ಕ್ರಮ ಕೈಗೊಂಡು ಕೆಂಪು ಮೆಣಸಿನಕಾಯಿ ರೈತರಿಗೆ ಮಧ್ಯಂತರ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಇಲ್ಲದಿದ್ದರೆ ಜಿಲ್ಲಾ ಮಟ್ಟದಿಂದ ರಾಜ್ಯ ಮಟ್ಟದವರೆಗೆ ಹೋರಾಟ ನಡೆಸಲಾಗುವುದು ಎಂದು ಕಿಸಾನ್ ಜಾಗೃತ ಸಂಘ ಹಾಗೂ ರೈತರು ಎಚ್ಚರಿಕೆ ನೀಡಿದ್ದಾರೆ.

# ಮಹಿಳಾ ದಿನಾಚರಣೆ ಅಂಗವಾಗಿ ಸ್ಪರ್ಧೆಗಳ ಫಲಿತಾಂಶ ಪ್ರಕಟ





■ ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ವೈ.ಬಿ.ಎಂ.ಎಸ್ ಯೋಗ ಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ಸಿದ್ಧಲಿಂಗನಗರ, ಗದಗ ವತಿಯಿಂದ 17ನೇ ವಾರ್ಷಿಕೋತ್ಸವ ಹಾಗೂ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಹಿಳೆಯರಿಗಾಗಿ ನಡೆಸಿದ ಜಿಲ್ಲಾ ಮಟ್ಟದ ನಿಬಂಧ ಮತ್ತು ವೇಷಭೂಷಣ ಸ್ಪರ್ಧೆಗಳ ಫಲಿತಾಂಶ ಪ್ರಕಟಿಸಲಾಗಿದೆ.

ನಿಬಂಧ ಸ್ಪರ್ಧೆಯಲ್ಲಿ ವಿದ್ಯಾಶ್ರೀ ಬಾಳಿಕಾಯಿ ಪ್ರಥಮ, ಅಶ್ವಿನಿ ಬಿ. ದ್ವಿತೀಯ ಹಾಗೂ ಯಶೋಧಾ ಹೊಸಮನಿ ತೃತೀಯ ಸ್ಥಾನ ಪಡೆದರು. ವೇಷಭೂಷಣ ಸ್ಪರ್ಧೆಯಲ್ಲಿ ಸುನಂದಾ ಜ್ಯಾನೋಪಂತರ ಪ್ರಥಮ, ಸುಲೋಚನಾ ಐಹೊಳ್ಳಿ ದ್ವಿತೀಯ ಹಾಗೂ ಅನಿತಾ ಅರಳಿ ತೃತೀಯ ಸ್ಥಾನ ಗಳಿಸಿದರು.

ಸದಸ್ಯರಿಗಾಗಿ ನಡೆದ ಮೋಜಿನ ಆಟಗಳಲ್ಲಿಯೂ ವಿಜೇತರನ್ನು ಆಯ್ಕೆ ಮಾಡಲಾಗಿದ್ದು, ಮಗ್ಗನಲ್ಲಿ ಬಾಲ್ ಹಾಕುವ ಸ್ಪರ್ಧೆಯಲ್ಲಿ ಜಯಶ್ರೀ ದಾವಣಗೇರಿ ಪ್ರಥಮ, ವೀಣಾ ಮಾಲಿಪಾಟೀಲ ದ್ವಿತೀಯ ಹಾಗೂ ಸುಲೋಚನಾ ಐಹೊಳ್ಳಿ ತೃತೀಯ ಸ್ಥಾನ ಪಡೆದರು. ಕಾಳು ಸಂಗ್ರಹ ಸ್ಪರ್ಧೆಯಲ್ಲಿ ಸುನಂದಾ ಜ್ಯಾನೋಪಂತರ ಪ್ರಥಮ, ಗೌರಿ ಜಿರಂಕಳಿ ದ್ವಿತೀಯ ಹಾಗೂ ವೀಣಾ ಮಾಲಿಪಾಟೀಲ ತೃತೀಯ ಸ್ಥಾನ ಪಡೆದರು.

ನಿಬಂಧ ಮತ್ತು ವೇಷಭೂಷಣ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನಗಳಿಗೆ ಕ್ರಮವಾಗಿ ರೂ.500, ರೂ.300 ಹಾಗೂ ರೂ.200 ಬಹುಮಾನಗಳನ್ನು ನೀಡಲಾಗಿದ್ದು, ಮೋಜಿನ ಆಟಗಳಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನಗಳಿಗೆ ಕ್ರಮವಾಗಿ ರೂ.100, ರೂ.75 ಹಾಗೂ ರೂ.50 ಬಹುಮಾನಗಳನ್ನು ನೀಡಲಾಗಿದೆ.

ನಿಬಂಧ ಸ್ಪರ್ಧೆಗೆ ಎಸ್.ಸಿ. ದಾಮೋದರ ಮತ್ತು ಲತಾ ವಿ. ಕಾಲವಾಡ ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದ್ದು, ವೇಷಭೂಷಣ ಹಾಗೂ ಮೋಜಿನ ಆಟಗಳಿಗೆ ಕಲಾವತಿ ಸಂಕನಗೌಡ್ರ ಮತ್ತು ಶ್ರೀದೇವಿ ಕೊಣ್ಣೂರ ನಿರ್ಣಾಯಕರಾಗಿದ್ದರು.

ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ, ಕಾರ್ಯದರ್ಶಿ ಸುಲೋಚನಾ ಐಹೊಳ್ಳಿ ಹಾಗೂ ಸದಸ್ಯರು ವಿಜೇತರು ಮತ್ತು ಕಾರ್ಯಕ್ರಮ ಯಶಸ್ವಿಗೊಳಿಸಿದ ಎಲ್ಲರಿಗೂ ಅಭಿನಂದನೆ ಸಲ್ಲಿಸಿದರು.

ವಿಪತ್ತು ನಿರ್ವಹಣಾ ಸಭೆಯಲ್ಲಿ ಸಚಿವ ಸಂತೋಷ ಲಾಡ್ ಕಟ್ಟುನಿಟ್ಟಿನ ನಿರ್ದೇಶನ

# ಬೆಳೆ ಹಾನಿ-ರೈತರಿಗೆ ತ್ವರಿತ ಪರಿಹಾರಕ್ಕೆ ಸೂಚನೆ





■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಾರ್ಚ್ ತಿಂಗಳ ಮೂರನೇ ವಾರದಲ್ಲಿ ಕಲಘಟಗಿ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಸುರಿದ ಅಕಾಲಿಕ ಆಲಿಕಲ್ಲು ಮಳೆಯಿಂದ ಉಂಟಾದ ಬೆಳೆ ಹಾನಿಗೆ ಸಂಬಂಧಿಸಿದಂತೆ ಅಧಿಕಾರಿಗಳು ತ್ವರಿತವಾಗಿ ಸಮೀಕ್ಷೆ ಪೂರ್ಣಗೊಳಿಸಿ ವರದಿ ಸಲ್ಲಿಸಬೇಕು ಹಾಗೂ ರೈತರಿಗೆ ನಿಯಮಾನುಸಾರ ಪರಿಹಾರ ಒದಗಿಸಬೇಕು ಎಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್. ಲಾಡ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಭವನದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಮಾತನಾಡಿದ ಅವರು, 2015ರ ನಂತರ ಇದೇ ರೀತಿಯ ಆಲಿಕಲ್ಲು ಮಳೆ ಮತ್ತೆ ಸಂಭವಿಸಿದ್ದು, ಮಾವು, ಕಬ್ಬು ಸೇರಿದಂತೆ ಕೃಷಿ, ತೋಟಗಾರಿಕೆ ಮತ್ತು ವಾಣಿಜ್ಯ ಬೆಳೆಗಳಿಗೆ ಭಾರೀ ಹಾನಿಯಾಗಿದೆ ಎಂದು ತಿಳಿಸಿದರು.

ಕೃಷಿ, ತೋಟಗಾರಿಕೆ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಸ್ಥಳ ಪರಿಶೀಲನೆ ನಡೆಸಿ ಶೀಘ್ರ ವರದಿ ಸಲ್ಲಿಸಬೇಕು. ಯಾವುದೇ ರೈತರು ಸಮೀಕ್ಷೆಯಿಂದ ಹೊರಗುಳಿಯದಂತೆ ಹಾಗೂ ಪರಿಹಾರದಿಂದ ವಂಚಿತರಾಗದಂತೆ ಖಚಿತಪಡಿಸಿಕೊಳ್ಳಬೇಕು ಎಂದು ಎಚ್ಚರಿಸಿದರು.

ಬೇಸಿಗೆ ಅವಧಿಯಲ್ಲಿ ಉಂಟಾಗುವ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಹಿಡಿಯಬೇಕು. ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಮುಕ್ತಗೊಳಿಸಬೇಕು ಎಂದು ಸೂಚಿಸಿದರು.

ಜಿಲ್ಲಾಧಿಕಾರಿ ಸ್ನೇಹಲ್ ಆರ್. ಮಾತನಾಡಿ, ಬೆಳೆ ಹಾನಿ ಸಮೀಕ್ಷೆ ಅಂತಿಮ ಹಂತದಲ್ಲಿದ್ದು ಶೀಘ್ರದಲ್ಲೇ ವರದಿ ಸಲ್ಲಿಸಲಾಗುವುದು. ವಿಮಾ ಪರಿಹಾರ ವಿತರಣೆಗಾಗಿ ಸಂಬಂಧಿತ ಕಂಪನಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಮಳೆಯಿಂದ ಹಾನಿಗೊಂಡ ಹೆಸ್ಕಾಂ ವಿದ್ಯುತ್ ವ್ಯವಸ್ಥೆಗಳ ಮರುಸ್ಥಾಪನೆ ಕಾರ್ಯ ನಡೆಯುತ್ತಿದ್ದು, 14 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ತಾತ್ಕಾಲಿಕವಾಗಿ ನಿವಾರಿಸಲಾಗಿದೆ ಎಂದು ಮಾಹಿತಿ ನೀಡಿದರು.

ಮಾರ್ಚ್ ತಿಂಗಳಲ್ಲಿ ಶೇ. 368ರಷ್ಟು ಹೆಚ್ಚುವರಿ ಮಳೆಯಾಗಿದ್ದು, ಇದರಿಂದ ಜಾನುವಾರುಗಳಿಗೂ ಹಾನಿ ಉಂಟಾಗಿದೆ. ಎಮ್ಮೆ, ಕುದುರೆ, ಕುರಿ-ಮೇಕೆಗಳ ಸಾವು ಪ್ರಕರಣಗಳಿಗೆ ಪರಿಹಾರ ನೀಡಲಾಗಿದೆ. 188 ಮನೆಗಳು ಭಾಗಶಃ ಹಾನಿಗೊಳಗಾಗಿದ್ದು, 201 ವಿದ್ಯುತ್ ಕಂಬಗಳು ಹಾನಿಗೊಳಗಾಗಿವೆ. ಹೆಸ್ಕಾಂಗೆ ಸುಮಾರು 119.55 ಲಕ್ಷ ರೂ. ನಷ್ಟವಾಗಿದೆ.

ಕಲಘಟಗಿ, ಹುಬ್ಬಳ್ಳಿ ಮತ್ತು ಕುಂದಗೋಳ ತಾಲೂಕುಗಳಲ್ಲಿ ಒಟ್ಟಾರೆ 1980.05 ಹೆಕ್ಟೇರ್ ಪ್ರದೇಶದ ಬೆಳೆಗಳು ಹಾನಿಗೊಳಗಾಗಿದ್ದು, ಕಬ್ಬು, ಸೋಯಾಬಿನ್, ಜೋಳ, ಮಾವು, ಬಾಳೆ, ಟೊಮೇಟೊ ಸೇರಿದಂತೆ ಹಲವು ಬೆಳೆಗಳು ನಷ್ಟಕ್ಕೀಡಾಗಿವೆ ಎಂದು ತಿಳಿಸಿದರು.

ಸಭೆಯಲ್ಲಿ ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಜಿಪಂ ಸಿಇಓ ಭುವನೇಶ ಪಾಟೀಲ, ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಹೆಚ್ಚುವರಿ ಅನುದಾನಕ್ಕೆ ಪ್ರಸ್ತಾವನೆ

ಕಲಘಟಗಿ ತಾಲೂಕಿನಲ್ಲಿ ಮಾವು ಬೆಳೆ ಹೆಚ್ಚು ಪ್ರಮಾಣದಲ್ಲಿ ಹಾನಿಗೊಳಗಾಗಿದೆ. ಬೆಳೆ ವಿಮೆ ಮಾಡಿಸಿಕೊಂಡ ರೈತರಿಗೆ ವಿಮಾ ಪರಿಹಾರ ದೊರೆಯಲಿದ್ದು, ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ನಿಯಮಾನುಸಾರ ಪರಿಹಾರ ನೀಡಲಾಗುತ್ತಿದೆ. ಹೆಚ್ಚುವರಿ ಹಾನಿಗೆ ಸಂಬಂಧಿಸಿದಂತೆ ವಿಶೇಷ ಅನುದಾನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಸೂಚಿಸಿದರು.

---

ಹಂಚಿನಾಳ-ಚಿಮ್ಮನಹಳ್ಳಿ ನಡುವೆ ಘಟನೆ; ಲಕ್ಷಾಂತರ ನಷ್ಟ, ಗ್ರಾಮಸ್ಥರಲ್ಲಿ ಆತಂಕ!

## ಕಲುಷಿತ ನೀರು ಕುಡಿದು 14 ಕುರಿಗಳ ಸಾವು!



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಹಂಚಿನಾಳ ಹಾಗೂ ಚಿಮ್ಮನಹಳ್ಳಿ ನಡುವಿನ ಉಪಹಳ್ಳದ ಕಲುಷಿತ ನೀರನ್ನು ಕುಡಿದು ಉಪ್ಪಾರಗಟ್ಟಿ ಗ್ರಾಮದ ಮೂಗಪ್ಪ ಅವರಿಗೆ ಸೇರಿದ 14 ಕುರಿಗಳು ಸಾವನ್ನಪ್ಪಿರುವ ಘಟನೆ ಗ್ರಾಮಸ್ಥರಲ್ಲಿ ಆತಂಕ ಮೂಡಿಸಿದೆ.

ಮೂಗಪ್ಪ ಅವರು ಕುರಿಗಳನ್ನು ಮೇಯಿಸಲು ಹೊಲದ ಕಡೆಗೆ ಕೊಂಡೊಯ್ದಿದ್ದಾಗ, ಬಿರು ಬೇಸಿಗೆಯಿಂದ ಬಳಲಿದ ಕುರಿಗಳು ಹಳ್ಳಕ್ಕೆ ನೀರು ಕುಡಿಯಲು ಬಂದಿವೆ. ನೀರು ಕುಡಿದ ತಕ್ಷಣ ಒಂದೊಂದಾಗಿ ಬಯಲಿನಲ್ಲಿ ಸಾಲಾಗಿ ಬಿದ್ದು ಸತ್ತು ಹೋಗಿವೆ. ಈ ದೃಶ್ಯ ಕಂಡ ಕುರಿಗಾಯಿಯ ಕಣ್ಣಲ್ಲಿ ನೀರು ತುಂಬಿ, ದುಃಖ ವ್ಯಕ್ತಪಡಿಸಿದ್ದಾರೆ.

ಸತ್ತ ಕುರಿಗಳ ಅಂದಾಜು ಮೌಲ್ಯ ಮೂರುರಿಂದ ನಾಲ್ಕು ಲಕ್ಷ ರೂಪಾಯಿಗಳಷ್ಟಿದೆ ಎಂದು ತಿಳಿದು ಬಂದಿದೆ.

ಸ್ಥಳೀಯರ ಪ್ರಕಾರ, ಹಳ್ಳದಲ್ಲಿ ಅನ್ನಭಾಗ್ಯದ ಅಕ್ಕಿ ಚೆಲ್ಲಲಾಗಿದ್ದು, ಅದರಿಂದ ನೀರು ಕಲುಷಿತಗೊಂಡಿರುವ ಸಾಧ್ಯತೆ ಇದೆ. ಹುಳು ಹಿಡಿದ ಅಥವಾ ಮುಗ್ಗು ಬಂದ ಅಕ್ಕಿಯನ್ನು ಯಾರೋ ಹಳ್ಳಕ್ಕೆ ಚೆಲ್ಲಿರುವ ಸಾಧ್ಯತೆ ಇದೆ ಎಂದು ಶಂಕಿಸಲಾಗಿದೆ.

ಘಟನಾ ಸ್ಥಳಕ್ಕೆ ಭೇಟಿ ನೀಡಿದ ತಾಲೂಕು ಪಶುವೈದ್ಯಾಧಿಕಾರಿ ಡಾ. ಸೂರಪ್ಪ ಅವರು ಪರಿಶೀಲನೆ ನಡೆಸಿ, ನೀರು ಹಾಗೂ ಅಕ್ಕಿಯ ಮಾದರಿಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಿರುವುದಾಗಿ ತಿಳಿಸಿದ್ದಾರೆ.

ಕಲುಷಿತ ನೀರು ಅಥವಾ ಹಳ್ಳಕ್ಕೆ ಚೆಲ್ಲಲಾದ ಅನ್ನಭಾಗ್ಯದ ಅಕ್ಕಿಯ ಕಾರಣದಿಂದ ಫುಡ್ ಪಾಯಿಸನ್ ಆಗಿದೆಯೋ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ನೀರು ಹಾಗೂ ಅಕ್ಕಿಯ ಮಾದರಿಗಳನ್ನು ಪರೀಕ್ಷೆಗೆ ಕಳುಹಿಸಲಾಗಿದ್ದು, ವರದಿ ಬಂದ ನಂತರ ನಿಖರ ಕಾರಣ ತಿಳಿಯಲಿದೆ ಎಂದು ತಾಲೂಕು ಪಶು ಮುಖ್ಯ ವೈದ್ಯಾಧಿಕಾರಿ ಡಾ. ಪಿ. ಸೂರಪ್ಪ ತಿಳಿಸಿದ್ದಾರೆ.

---

ಜನರ ಸಂಕಷ್ಟಕ್ಕೆ ತೆರೆ- ಸಂಚಾರಕ್ಕೆ ಸುಗಮ; ಸಾರ್ವಜನಿಕರ ಅಭಿನಂದನೆ

## ಬೆಟಗೇರಿ ರೈಲ್ವೆ ಬ್ರಿಡ್ಜ್ ಓಪನ್

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ಭಾಗದ ಅಬ್ದುಲ್ ಕಲಾಂ ಶಾದಿ ಮಹಲ್ ಹತ್ತಿರದ ರೈಲ್ವೆ ಬ್ರಿಡ್ಜ್ ಅನ್ನು ಕಳೆದ ಕೆಲವು ದಿನಗಳಿಂದ ಬಂದ್ ಮಾಡಲಾಗಿದ್ದರಿಂದ ಶಾಲಾ ಮಕ್ಕಳು, ತುರ್ತು ರೋಗಿಗಳು ಹಾಗೂ ಸ್ಥಳೀಯ ಸಾರ್ವಜನಿಕರು ಸಂಚಾರದಲ್ಲಿ ತೊಂದರೆ ಅನುಭವಿಸುತ್ತಿದ್ದರು.

ಈ ಹಿನ್ನೆಲೆಯಲ್ಲಿ ರೈಲ್ವೆ ಅಧಿಕಾರಿಗಳು ಮಾರ್ಚ್ 31, 2026ರಂದು ಬ್ರಿಡ್ಜ್ ತೆರವುಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸಿದ್ದಾರೆ. ಇದರಿಂದ ಬೆಟಗೇರಿ ಭಾಗದ ಜನರಿಗೆ ದೈನಂದಿನ ಸಂಚಾರ ಸುಲಭವಾಗಿದೆ.

ಈ ಕ್ರಮವು ಸಂಸದರು ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಸೂಚನೆ ಮೇರೆಗೆ ಕೈಗೊಳ್ಳಲಾಗಿದೆ ಎಂದು ತಿಳಿದು ಬಂದಿದೆ.

ಈ ಸಂದರ್ಭದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಮಾಜಿ ಸಚಿವ ಹಾಗೂ ಶಾಸಕರಾದ ಸಿ.ಸಿ. ಪಾಟೀಲ್, ಎಂಎಲ್‌ಸಿ ಎಸ್.ವಿ. ಸಂಕನೂರ ಅವರು ರೈಲ್ವೆ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆ ಪರಿಹರಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದರು.

ಬ್ರಿಡ್ಜ್ ತೆರವುಗೊಳಿಸಿ ಜನರಿಗೆ ಅನುಕೂಲ ಕಲ್ಪಿಸಿದ ರೈಲ್ವೆ ಅಧಿಕಾರಿಗಳಿಗೆ ಬೆಟಗೇರಿ ಭಾಗದ ಸಾರ್ವಜನಿಕರು ಅಭಿನಂದನೆ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಶಿವರಾಜಗೌಡ ಹಿರೇಮನಿಪಾಟೀಲ್, ಮಹೇಶ್ ಕೋಟಿ, ಮುದಕಪ್ಪ ಹೋಳಿ, ಅಂದಪ್ಪ ಮುಲ್ಲಾಳ್, ಹರೀಶ್ ಪೂಜಾರ್, ಐಲಿ, ಸತೀಶ್ ಪೂಜಾರ್, ಗವಿಸಿದ್ದಪ್ಪ ಚಲವಾದಿ, ಹರೀಶ್ ರಾಂಪುರ, ಅಜ್ಜನಗೌಡ ಹಿರೇಮನಿಪಾಟೀಲ್, ಮುತ್ತಣ್ಣ ಧೋನಿ, ಸಿದ್ದು ಮಾಕಾಪುರ ಹಾಗೂ ಶರಣ ಬಸವೇಶ್ವರ ಬಡಾವಣೆಯ ನಾಗರಿಕರು ಉಪಸ್ಥಿತರಿದ್ದರು.



---

ಪಿಂಚಣಿ ತಕ್ಷಣ ಜಮಾ ಮಾಡಲು ಒತ್ತಾಯ; ಇಲ್ಲದಿದ್ದರೆ ಧರಣಿ ಎಚ್ಚರಿಕೆ

## ವೃದ್ಧಾಪ್ಯ ವೇತನ ತಡೆ: ಹಿರಿಯ ನಾಗರಿಕರ ಆಕ್ರೋಶ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಡೆಹಿಡಿದಿರುವ ಹಿರಿಯ ನಾಗರಿಕರ ವೃದ್ಧಾಪ್ಯ ವೇತನವನ್ನು ತಕ್ಷಣ ಮಂಜೂರು ಮಾಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ತಹಸೀಲ್ದಾರರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ತಾಲೂಕ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಹಾಗೂ ಗೌರವಾಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾತನಾಡಿ, 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ವೃದ್ಧಾಪ್ಯ ವೇತನವನ್ನು ಈ ಹಿಂದಿನಿಂದಲೇ ನಿಯಮಿತವಾಗಿ ಪಡೆಯುತ್ತಿದ್ದರು. ಆದರೆ ಇತ್ತೀಚೆಗೆ ಅವರ ಖಾತೆಗಳಿಗೆ ಪಿಂಚಣಿ ಜಮಾ ಆಗದೆ ಇರುವುದರಿಂದ ಜೀವನ ನಿರ್ವಹಣೆ ಹಾಗೂ ಆರೋಗ್ಯ ಸಂಬಂಧಿತ ಸಮಸ್ಯೆಗಳು ಎದುರಾಗುತ್ತಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ಕುರಿತು ಗದಗ ಜಿಲ್ಲಾ ಪಂಚ ಗ್ಯಾರಂಟಿ ಸಮಿತಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಗೂ ಮನವಿ ಸಲ್ಲಿಸಲಾಗಿದೆ. ಸಭೆಯಲ್ಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಪಿಂಚಣಿ ತಕ್ಷಣ ಜಮಾ ಮಾಡುವಂತೆ ಸಚಿವರು ಮೌಖಿಕ ಸೂಚನೆ ನೀಡಿದರೂ ಇನ್ನೂ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿದರು.

ಆದಷ್ಟು ಬೇಗ ಪಿಂಚಣಿ ಜಮಾ ಮಾಡದಿದ್ದರೆ ತಹಸೀಲ್ದಾರ್ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಮಹಿಳಾ ಘಟಕದ ಅಧ್ಯಕ್ಷೆ ಶಕುಂತಲಾ ಅಳಗವಾಡಿ, ಚನ್ನಪ್ಪ ಕೋಲಕಾರ, ಐ.ಎಸ್. ಮಡಿವಾಳರ, ಎಸ್.ಎಸ್. ಪವಾಡಶೆಟ್ಟರ, ಸೂಗಿರಪ್ಪ ವಾಲಿಶೆಟ್ಟರ, ಬಸವರಾಜ ಹಾದಿಮನಿ, ನಿಂಗಪ್ಪ ಗೊರವರ, ಶಂಕ್ರಪ್ಪ ಬಡಿಗೇರ, ಬಿ.ಎಸ್. ರಬ್ಬನಗೌಡ್ರ, ವೀರಭದ್ರಗೌಡ ಪಾಟೀಲ ಸೇರಿದಂತೆ ಅನೇಕ ಹಿರಿಯ ನಾಗರಿಕರು ಉಪಸ್ಥಿತರಿದ್ದರು.

ಗ್ರೇಡ್-2 ತಹಸೀಲ್ದಾರ್ ಮಂಜುನಾಥ ಅಮಾಸಿ ಅವರು ಮನವಿಯನ್ನು ಸ್ವೀಕರಿಸಿದರು.

> "ವೃದ್ಧಾಪ್ಯ ವೇತನ ನಮ್ಮ ಬದುಕಿನ ಆಧಾರ; ತಕ್ಷಣ ಜಮಾ ಮಾಡದಿದ್ದರೆ ಹೋರಾಟ ಅನಿವಾರ್ಯ"
> – ಸಿ.ಆರ್. ಲಕ್ಕುಂಡಿಮಠ

---

ತ್ರಿಭಾಷಾ ಸೂತ್ರ ಬದಲಾವಣೆಗೆ ರಾಘವೇಂದ್ರ ಹಬೀಬ ಆಕ್ಷೇಪ- ಹಿಂದಿ ಅಂಕ ಪದ್ಧತಿ ಮುಂದುವರಿಸಲು ಒತ್ತಾಯ

## ತೃತೀಯ ಭಾಷೆ ಹಿಂದಿಗೆ ಗ್ರೇಡ್ ಪದ್ಧತಿಗೆ ವಿರೋಧ



> "ತೃತೀಯ ಭಾಷೆ ಹಿಂದಿಗೆ ಅಂಕ ಪದ್ಧತಿ ಅಗತ್ಯ, ಗ್ರೇಡ್ ವ್ಯವಸ್ಥೆ ವಿದ್ಯಾರ್ಥಿಗಳಿಗೆ ಅನ್ಯಾಯವಾಗಬಹುದು"
> – ರಾಘವೇಂದ್ರ ಹಬೀಬ.

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತೃತೀಯ ಭಾಷೆ ಹಿಂದಿಗೆ ಅಂಕಗಳನ್ನು ಕೈಬಿಟ್ಟು ಗ್ರೇಡ್ ಪದ್ಧತಿ ಜಾರಿಗೊಳಿಸುವ ಪ್ರಸ್ತಾವಕ್ಕೆ ಸುದರ್ಶನ ಚಕ್ರ ಯುವ ಮಂಡಳದ ಅಧ್ಯಕ್ಷ ರಾಘವೇಂದ್ರ ಗಂಗಾಸಾ ಹಬೀಬ ವಿರೋಧ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಾತೃಭಾಷೆಯೊಂದಿಗೆ ಜ್ಞಾನಾರ್ಜನೆ ಮತ್ತು ಸಂಪರ್ಕ ಸಾಧನವಾಗಿ ಹಿಂದಿ ಹಾಗೂ ಇಂಗ್ಲೀಷ್ ಭಾಷೆಗಳು ಅವಶ್ಯಕವಾಗಿವೆ ಎಂದು ಅವರು ಹೇಳಿದ್ದಾರೆ. ಪ್ರತಿ ರಾಜ್ಯದ ಜನತೆಗೆ ತಮ್ಮ ಮಾತೃಭಾಷೆಯ ಮೇಲೆ ಅಭಿಮಾನ ಸಹಜವಾದರೂ, ಸಂಪರ್ಕ ಭಾಷೆಗಳಾದ ಹಿಂದಿ ಮತ್ತು ಇಂಗ್ಲೀಷ್‌ಗೂ ಸಮಾನ ಮಹತ್ವ ನೀಡಬೇಕು ಎಂದು ತಿಳಿಸಿದ್ದಾರೆ.

ಕರ್ನಾಟಕ ಶಿಕ್ಷಣ ಇಲಾಖೆಯು ಎಸ್.ಎಸ್.ಎಲ್.ಸಿ ಪರೀಕ್ಷಾ ಪದ್ಧತಿಯಲ್ಲಿ ತಂದಿರುವ ಬದಲಾವಣೆ ವಿದ್ಯಾರ್ಥಿಗಳ ಭವಿಷ್ಯ ಮತ್ತು ಶೈಕ್ಷಣಿಕ ವಲಯದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ಹಲವು ವರ್ಷಗಳಿಂದ ಅನುಷ್ಠಾನದಲ್ಲಿದ್ದ ತ್ರಿಭಾಷಾ ಸೂತ್ರಕ್ಕೆ ಈ ಬದಲಾವಣೆ ಧಕ್ಕೆ ತರುತ್ತದೆ ಎಂದು ಅವರು ಆರೋಪಿಸಿದ್ದಾರೆ.

ತೃತೀಯ ಭಾಷೆಗೆ ಅಂಕಗಳನ್ನು ಕೈಬಿಟ್ಟು ಕೇವಲ ಗ್ರೇಡ್ ಪದ್ಧತಿಗೆ ಸೀಮಿತಗೊಳಿಸುವ ಕ್ರಮ ಶಿಕ್ಷಣ ಕ್ಷೇತ್ರದಲ್ಲಿ ಗೊಂದಲ ಮತ್ತು ಅರಾಜಕತೆ ಉಂಟುಮಾಡಬಹುದು. ಶಿಕ್ಷಣ ತಜ್ಞರೊಂದಿಗೆ ಸಮಾಲೋಚನೆ ನಡೆಸದೆ ಏಕಾಏಕಿ ನಿರ್ಧಾರ ಕೈಗೊಳ್ಳುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

ಕನ್ನಡ ಮಾತೃಭಾಷೆಯಾಗಿದ್ದರೂ, ಇಂಗ್ಲೀಷ್ ಹಾಗೂ ಹಿಂದಿ ಭಾಷೆಗಳು ಜ್ಞಾನಾರ್ಜನೆ ಮತ್ತು ಸಂಪರ್ಕ ಸಾಧನವಾಗಿ ಪ್ರಮುಖವಾಗಿವೆ. ಮಾತೃಭಾಷೆಯೊಂದಿಗೆ ಇತರ ಭಾಷೆಗಳಿಗೂ ಸಮತೋಲನವಾಗಿ ಮಹತ್ವ ನೀಡಬೇಕು ಎಂದು ಅವರು ತಿಳಿಸಿದ್ದಾರೆ.

ಹಿಂದಿ ಭಾಷೆಯನ್ನು ಶಿಕ್ಷಣ ವ್ಯವಸ್ಥೆಯಿಂದ ದೂರ ಮಾಡುವುದರಿಂದ ಮಹಾತ್ಮ ಗಾಂಧೀಜಿ ಅವರ ವಿಚಾರಗಳಿಗೆ ಧಕ್ಕೆ ಉಂಟಾಗುತ್ತದೆ. ಆದ್ದರಿಂದ ಹಿಂದಿ ವಿಷಯದ ಬದಲಾವಣೆಯನ್ನು ಪುನರ್ ಪರಿಶೀಲಿಸಿ, ಅಂಕ ಪದ್ಧತಿಯನ್ನು ಮುಂದುವರಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

---

5 ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳ ನಿರೀಕ್ಷೆ; ಒಂದೇ ಸ್ಥಳದಲ್ಲಿ ನೂರಾರು ಉದ್ಯೋಗ ಅವಕಾಶಗಳು

## ಏ. 11ರಂದು ಬೃಹತ್ ಉದ್ಯೋಗ ಮೇಳ: ಯುವಕರಿಗೆ ಸುವರ್ಣಾವಕಾಶ



> "ಯುವಕರು ಉದ್ಯೋಗ ಮೇಳದಂತಹ ಅವಕಾಶಗಳನ್ನು ಬಳಸಿಕೊಂಡು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು"
> – ಶರಣಬಸಪ್ಪ ಸಂಗಪ್ಪ ಗುಡಿಮನಿ.

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕನೆಕ್ಟ್ ಸಂಸ್ಥೆ ಧಾರವಾಡ ಹಾಗೂ ಜಗದ್ಗುರು ತೋಂಟ-ದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಏಪ್ರಿಲ್ 11, 2026ರಂದು ಶನಿವಾರ ಬೆಳಿಗ್ಗೆ 8 ಗಂಟೆಗೆ ಗದಗ ನಗರದ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬೃಹತ್ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ.

ಮೇಳದಲ್ಲಿ ಸುಮಾರು 5,000ಕ್ಕೂ ಹೆಚ್ಚು ಅಭ್ಯರ್ಥಿಗಳು ಭಾಗವಹಿಸುವ ನಿರೀಕ್ಷೆ ಇದ್ದು, ಉದ್ಘಾಟನಾ ಸಮಾರಂಭವು ಅದೇ ದಿನ ಬೆಳಿಗ್ಗೆ 11 ಗಂಟೆಗೆ ಜರುಗಲಿದೆ. ಕಾರ್ಯಕ್ರಮಕ್ಕೆ ಜಗದ್ಗುರು ಶ್ರೀ ತೋಂಟದ ಸಿದ್ದರಾಮ ಮಹಾಸ್ವಾಮಿಗಳ ದಿವ್ಯ ಸಾನಿಧ್ಯವಿದ್ದು, ಸಚಿವರು ಹಾಗೂ ಶಾಸಕರು ಭಾಗವಹಿಸಲಿದ್ದಾರೆ.

ನಿರುದ್ಯೋಗ ಸಮಸ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಯುವಕರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸಿ ಅವರನ್ನು ಸ್ವಾವಲಂಬಿಗಳನ್ನಾಗಿಸುವ ಉದ್ದೇಶದಿಂದ ಈ ಮೇಳವನ್ನು ಆಯೋಜಿಸಲಾಗಿದೆ. ಯುವಕ-ಯುವತಿಯರು ಉದ್ಯೋಗ ಪಡೆದು ಗೌರವಯುತ ಜೀವನ ನಡೆಸಬೇಕು ಎಂಬುದು ಇದರ ಮುಖ್ಯ ಉದ್ದೇಶವಾಗಿದೆ.

ಈ ಉದ್ಯೋಗ ಮೇಳದಲ್ಲಿ ಅಭ್ಯರ್ಥಿಗಳಿಗೆ ಒಂದೇ ಸ್ಥಳದಲ್ಲಿ ಅನೇಕ ಕಂಪನಿಗಳ ಮಾಹಿತಿಯನ್ನು ಪಡೆಯುವ ಅವಕಾಶ ದೊರೆಯುತ್ತದೆ. ಇದರಿಂದ ಸಮಯ ಮತ್ತು ವೆಚ್ಚ ಉಳಿತಾಯವಾಗುತ್ತದೆ. ಜೊತೆ-ಗೆ, ತಮ್ಮ ವಿದ್ಯಾರ್ಹತೆ ಹಾಗೂ ಕೌಶಲ್ಯಗಳಿಗೆ ತಕ್ಕ ಉದ್ಯೋಗವನ್ನು ಆಯ್ಕೆ ಮಾಡಿಕೊಳ್ಳಲು ಅನುಕೂಲವಾಗುತ್ತದೆ.

ಮೇಳದಲ್ಲಿ ನೇರ ಸಂದರ್ಶನಗಳ ವ್ಯವಸ್ಥೆಯಿದ್ದು, ಅಭ್ಯರ್ಥಿಗಳು ತಮ್ಮ ಸಾಮರ್ಥ್ಯವನ್ನು ತಕ್ಷಣ ಪ್ರದರ್ಶಿಸಲು ಅವಕಾಶ ಸಿಗುತ್ತದೆ. ಕೆಲವರಿಗೆ ಅದೇ ದಿನ ಉದ್ಯೋಗ ಸಿಗುವ ಸಾಧ್ಯತೆಯೂ ಇದೆ.

ಈ ರೀತಿಯ ಮೇಳಗಳು ಯುವಕರಲ್ಲಿ ಆತ್ಮವಿಶ್ವಾಸವನ್ನು ಹೆಚ್ಚಿಸುವುದರ ಜೊತೆಗೆ ಉದ್ಯೋಗ ಕ್ಷೇತ್ರದ ಕುರಿತು ಸ್ಪಷ್ಟ ಅರಿವು ಮೂಡಿಸುತ್ತವೆ.

ಇದೇ ವೇಳೆ, ಕಂಪನಿಗಳಿಗೆ ತಕ್ಕ ಪ್ರತಿಭೆಯನ್ನು ಕಡಿಮೆ ಸಮಯದಲ್ಲಿ ಆಯ್ಕೆ ಮಾಡಿಕೊಳ್ಳಲು ಈ ಮೇಳ ಸಹಾಯಕವಾಗಲಿದೆ. ಇದರಿಂದ ನೇಮಕಾತಿ ಪ್ರಕ್ರಿಯೆ ಸುಗಮಗೊಳ್ಳಲಿದೆ. ಒಟ್ಟಾರೆ, ಈ ಉದ್ಯೋಗ ಮೇಳವು ಯುವಕರ ಭವಿಷ್ಯ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸುವ ನಿರೀಕ್ಷೆಯಿದೆ.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಅವರು ಯುವಕರು ಈ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ತಮ್ಮ ವೃತ್ತಿ ಜೀವನವನ್ನು ಸಾರ್ಥಕಗೊಳಿಸಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪ್ರಭಣ್ಣ ಹುಣಸಿಕಟ್ಟಿ ಅವರು ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka